ಸಾರ್ವಜನಿಕ ಶಿಕ್ಷಣ ಇಲಾಖೆಯ ಶಿಕ್ಷಣಾಧಿಕಾರಿ ಹಾಗೂ ತತ್ಸಮಾನ ವೃಂದದ ಅಧಿಕಾರಿಯಾದ ಶ್ರೀ ಕೆ.ಶಿವೇಗೌಡ ಕಾರ್ಯ ನಿರ್ವಹಣಾಧಿಕಾರಿ, ತಾಲ್ಲೂಕು ಪಂಚಾಯಿತಿ, ಹಾಸನ ತಾಲ್ಲೂಕು & ಜಿಲ್ಲೆ ಇವರಿಗೆ ₹ 14,050–25,050 ಗ್ರೂಪ್ 'ಎ' ಕಿರಿಯ ವೇತನ ಶ್ರೇಣಿಯ ಶಿಕ್ಷಣಾಧಿಕಾರಿ ವೃಂದದ ಹುದ್ದೆಯಲ್ಲಿ ಇವರಿಗಿಂತ ಜ್ಯೇಷ್ಠತೆಯಲ್ಲಿ ಕಿರಿಯರಾದ ಶ್ರೀಮತಿ ಟಿ.ಎನ್.ಗಾಯತ್ರಿದೇವಿ ಇವರಿಗೆ ಪದೋನ್ನತಿ ನೀಡಿದ ದಿನಾಂಕ:03–07–2007 ರಿಂದ ಪೂರ್ವಾನ್ವಯವಾಗಿ ಜಾರಿಗೆ ಬರುವಂತೆ ಕರ್ನಾಟಕ ನಾಗರೀಕ ಸೇವಾ (ಆರ್.ಪಿ.ಪಿ. & ಪಿ) ನಿಯಮಾವಳಿ ನಿಯಮ–2(1)(ಎ) ರನ್ವಯ ಶಿಕ್ಷಣಾಧಿಕಾರಿ ಹಾಗೂ ತತ್ಸಮಾನ ಹುದ್ದೆಗೆ ಸ್ಥಾನಪನ್ನ ಪದೋನ್ನತಿ ನೀಡಿ, ಆದೇಶಿಸಿದೆ.

ಮುಂದುವರೆದು ಸಾರ್ವಜನಿಕ ಶಿಕ್ಷಣ ಇಲಾಖೆಯ ಗ್ರೂಪ್–ಎ ಕಿರಿಯ ಶ್ರೇಣಿಯ ಶಿಕ್ಷಣಾಧಿಕಾರಿ ಹಾಗೂ ತತ್ಸಮಾನ ವೃಂದದ ಅಧಿಕಾರಿಗಳ ಅಂತಿಮ ಜ್ಯೇಷ್ಠತಾ ಪಟ್ಟಿಯನ್ನು ಪ್ರಕಟಿಸಲಾದ ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 101 ಡಿಜಿಓ 2009, ದಿನಾಂಕ:29–04–2010ಕ್ಕೆ ಈ ಕೆಳಕಂಡಂತೆ ಅನುಬಂಧದಲ್ಲಿರುವಂತೆ ತಿದ್ದುಪಡಿ / ಸೇರ್ಪಡೆ ಮಾಡಿ ಆದೇಶಿಸಿದೆ.

ಕ್ರ. ಸಂ.	ಗ್ರೂಪ್ ಬಿ ಜ್ಯೇಷ್ಠತಾ ಸಂಖ್ಯೆ	ಗ್ರೂಪ್ ಬಿ ಜ್ಯೇಷ್ಠತಾ ಸಂಖ್ಯೆ	ಅಧಿಕಾರಿಯ ಹೆಸರು ಶ್ರೀ/ಶ್ರೀಮತಿ	ಜನ್ಮದಿನಾಂಕ	ಗ್ರೂಪ್ ಬಿ ಹುದ್ದೆಗೆ ನೇಮಕಾತಿ / ಬಡ್ತಿ ಹೊಂದಿದ ದಿನಾಂಕ	ಗ್ರೂಪ್ ಎ ಕಿರಿಯ ಶ್ರೇಣಿಗೆ ಬಡ್ತಿ ಹೊಂದಿದ ದಿನಾಂಕ
1	**2**	**3**	**4**	**5**	**6**	**7**
	733	123	ಕೆ.ಕಾಂತರಾಜು	20–06–57	15–01–94	03–07–2007
	734	123 ಎ	ಎ.ಶ್ಯಾಮಸುಂದರ್	23–07–63	22–01–94	03–07–2007
1.	**735**	**123 ಬಿ**	**ಕೆ.ಶಿವೇಗೌಡ**	**05–07–63**	**27–01–94**	**03–07–2007**
	736	124	ಟಿ.ಎನ್.ಗಾಯತ್ರಿ ದೇವಿ	17–04–64	17–01–94	03–07–2007

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಶ್ರೀಪಾದು.ಹೆಚ್.ಎನ್,
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ಸಮಿತಿಗಳು).

P.R. 56

ಶಿಕ್ಷಣ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಇಡಿ 242 ಡಿಜಿಎಂ 2012, ಬೆಂಗಳೂರು, ದಿನಾಂಕ: 07ನೇ ಜನವರಿ 2013.

ಸಾರ್ವಜನಿಕ ಶಿಕ್ಷಣ ಇಲಾಖೆಯ ಶಿಕ್ಷಣಾಧಿಕಾರಿ ಹಾಗೂ ತತ್ಸಮಾನ ವೃಂದದ ಅಧಿಕಾರಿಯಾದ ಶ್ರೀ ಅಬ್ದುಲ್ ವಾಜೀದ್ ಖಾಜಿ, ಹಿರಿಯ ಸಹಾಯಕ ನಿರ್ದೇಶಕರು, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ ಇವರಿಗೆ ₹ 14,050–25,050 ಗ್ರೂಪ್ 'ಎ' ಕಿರಿಯ ವೇತನ ಶ್ರೇಣಿಯ ಶಿಕ್ಷಣಾಧಿಕಾರಿ ವೃಂದದ ಹುದ್ದೆಯಲ್ಲಿ ಇವರಿಗಿಂತ ಜ್ಯೇಷ್ಠತೆಯಲ್ಲಿ ಕಿರಿಯರಾದ ಬಸವರಾಜ್ ಸಿ ಗವನಹಳ್ಳಿ ಇವರಿಗೆ ಪದೋನ್ನತಿ ನೀಡಿದ ದಿನಾಂಕ: 03–07–2007 ರಿಂದ ಪೂರ್ವಾನ್ವಯವಾಗಿ ಜಾರಿಗೆ ಬರುವಂತೆ ಕರ್ನಾಟಕ ನಾಗರೀಕ ಸೇವಾ (ಆರ್.ಪಿ.ಪಿ. & ಪಿ) ನಿಯಮಾವಳಿ ನಿಯಮ–2(1)(ಎ) ರನ್ವಯ ಶಿಕ್ಷಣಾಧಿಕಾರಿ ಹಾಗೂ ತತ್ಸಮಾನ ಹುದ್ದೆಗೆ ಸ್ಥಾನಪನ್ನ ಪದೋನ್ನತಿ ನೀಡಿ ಆದೇಶಿಸಿದೆ.

ಮುಂದುವರೆದು ಸಾರ್ವಜನಿಕ ಶಿಕ್ಷಣ ಇಲಾಖೆಯ ಗ್ರೂಪ್–ಎ ಕಿರಿಯ ಶ್ರೇಣಿಯ ಶಿಕ್ಷಣಾಧಿಕಾರಿ ಹಾಗೂ ತತ್ಸಮಾನ ವೃಂದದ ಅಧಿಕಾರಿಗಳ ಅಂತಿಮ ಜ್ಯೇಷ್ಠತಾ ಪಟ್ಟಿಯನ್ನು ಪ್ರಕಟಿಸಲಾದ ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 101 ಡಿಜಿಓ 2009, ದಿನಾಂಕ:29–04–2010ಕ್ಕೆ ಈ ಕೆಳಕಂಡಂತೆ ಅನುಬಂಧದಲ್ಲಿರುವಂತೆ ತಿದ್ದುಪಡಿ / ಸೇರ್ಪಡೆ ಮಾಡಿ ಆದೇಶಿಸಿದೆ.

ಕ್ರ. ಸಂ.	ಗ್ರೂಪ್ ಬಿ ಜ್ಯೇಷ್ಠತಾ ಸಂಖ್ಯೆ	ಗ್ರೂಪ್ ಬಿ ಜ್ಯೇಷ್ಠತಾ ಸಂಖ್ಯೆ	ಅಧಿಕಾರಿಯ ಹೆಸರು ಶ್ರೀ/ಶ್ರೀಮತಿ	ಜನ್ಮದಿನಾಂಕ	ಗ್ರೂಪ್ ಬಿ ಹುದ್ದೆಗೆ ನೇಮಕಾತಿ / ಬಡ್ತಿ ಹೊಂದಿದ ದಿನಾಂಕ	ಗ್ರೂಪ್ ಎ ಕಿರಿಯ ಶ್ರೇಣಿಗೆ ಬಡ್ತಿ ಹೊಂದಿದ ದಿನಾಂಕ
1	**2**	**3**	**4**	**5**	**6**	**7**
	727	96	ಸಂಗಪ್ಪ ಹಳಂಗಳಿಯಂಕಪ್ಪ	01–05–57	31–01–94	03–07–2007

1.	**728**	**96 ಎ**	ಅಬ್ದುಲ್ ವಾಜೀದ್ ಖಾಜಿ	**02–06–61**	**20–01–94**	**03–07–2007**
	729	97 ಬಿ	ಬಸವರಾಜ ಸಿ ಗವನಹಳ್ಳಿ	01–01–64	25–01–94	03–07–2007

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಶ್ರೀಪಾದು.ಹೆಚ್.ಎನ್,
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ಸಮಿತಿಗಳು).

P.R. 54

ಶಿಕ್ಷಣ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಇಡಿ 235 ಡಿಜಿಎಂ 2012, ಬೆಂಗಳೂರು, ದಿನಾಂಕ: 27ನೇ ಡಿಸೆಂಬರ್ 2012.

ಸಾರ್ವಜನಿಕ ಶಿಕ್ಷಣ ಇಲಾಖೆಯ ಶಿಕ್ಷಣಾಧಿಕಾರಿ ಹಾಗೂ ತತ್ಸಮಾನ ವೃಂದದ ಅಧಿಕಾರಿಯಾದ ಶ್ರೀಮತಿ ಎಸ್.ಮಮತ, ಶಿಕ್ಷಣಾಧಿಕಾರಿ, ಉಪ ನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಹಾಸನ ಜಿಲ್ಲೆ ಇವರಿಗೆ ₹ 14,050–25,050 ಗ್ರೂಪ್ 'ಎ' ಕಿರಿಯ ವೇತನ ಶ್ರೇಣಿಯ ಶಿಕ್ಷಣಾಧಿಕಾರಿ ವೃಂದದ ಹುದ್ದೆಯಲ್ಲಿ ಇವರಿಗಿಂತ ಜೇಷ್ಠತೆಯಲ್ಲಿ ಕಿರಿಯರಾದ ಶ್ರೀ ಹೆಚ್.ವಿ.ಕೆಂಪರಾಜು ಇವರಿಗೆ ಪದೋನ್ನತಿ ನೀಡಿದ ದಿನಾಂಕ: 03–07–2007 ರಿಂದ ಪೂರ್ವಾನ್ವಯವಾಗಿ ಜಾರಿಗೆ ಬರುವಂತೆ ಕರ್ನಾಟಕ ನಾಗರೀಕ ಸೇವಾ (ಆರ್.ಪಿ.ಪಿ. & ಪಿ) ನಿಯಮಾವಳಿ ನಿಯಮ–2(1)(ಎ) ರನ್ವಯ ಶಿಕ್ಷಣಾಧಿಕಾರಿ ಹಾಗೂ ತತ್ಸಮಾನ ಹುದ್ದೆಗೆ ಸ್ಥಾನಪನ್ನ ಪದೋನ್ನತಿ ನೀಡಿ ಆದೇಶಿಸಿದೆ.

ಮುಂದುವರೆದು ಸಾರ್ವಜನಿಕ ಶಿಕ್ಷಣ ಇಲಾಖೆಯ ಗ್ರೂಪ್–ಎ ಕಿರಿಯ ಶ್ರೇಣಿಯ ಶಿಕ್ಷಣಾಧಿಕಾರಿ ಹಾಗೂ ತತ್ಸಮಾನ ವೃಂದದ ಅಧಿಕಾರಿಗಳ ಅಂತಿಮ ಜ್ಯೇಷ್ಠತಾ ಪಟ್ಟಿಯನ್ನು ಪ್ರಕಟಿಸಲಾದ ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 101 ಡಿಜಿಓ 2009, ದಿನಾಂಕ:29–04–2010ಕ್ಕೆ ಈ ಕೆಳಕಂಡಂತೆ ಅನುಬಂಧದಲ್ಲಿರುವಂತೆ ತಿದ್ದುಪಡಿ / ಸೇರ್ಪಡೆ ಮಾಡಿ ಆದೇಶಿಸಿದೆ.

ಕ್ರ. ಸಂ.	ಗ್ರೂಪ್ ಬಿ ಜ್ಯೇಷ್ಠತಾ ಸಂಖ್ಯೆ	ಗ್ರೂಪ್ ಎ ಕಿರಿಯ ಶ್ರೇಣಿ ಜ್ಯೇಷ್ಠತಾ ಸಂಖ್ಯೆ	ಅಧಿಕಾರಿಯ ಹೆಸರು ಶ್ರೀ/ಶ್ರೀಮತಿ	ಜನ್ಮದಿನಾಂಕ	ಗ್ರೂಪ್ ಬಿ ಹುದ್ದೆಗೆ ನೇಮಕಾತಿ / ಬಡ್ತಿ ಹೊಂದಿದ ದಿನಾಂಕ	ಗ್ರೂಪ್ ಎ ಕಿರಿಯ ಶ್ರೇಣಿಗೆ ಬಡ್ತಿ ಹೊಂದಿದ ದಿನಾಂಕ
1	**2**	**3**	**4**	**5**	**6**	**7**
	755	140	ಶಿವನಗೌಡ ಬಿ ಪಾಟೀಲ್	02–02–52	24–01–94	03–07–2007
1.	**756**	**140 ಎ**	ಎಸ್.ಮಮತ	**08–02–59**	**29–01–94**	**03–07–2007**
	757	141	ಹೆಚ್.ವಿ.ಕೆಂಪರಾಜು	01–06–61	19–01–94	03–07–2007

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಶ್ರೀಪಾದು.ಹೆಚ್.ಎನ್,
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ಸಮಿತಿಗಳು).

P.R. 19

ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಸಚಿವಾಲಯ

ಅಧಿಕೃತ ಜ್ಞಾಪನ

ಸಂಖ್ಯೆ: ಸಿಆಸುಇ 01 ರಾರಾಆ 2013, ಬೆಂಗಳೂರು, ದಿನಾಂಕ: 18ನೇ ಜನವರಿ 2013.

ವಿಷಯ: ಭಾರತದ ಸ್ವಾತಂತ್ರ್ಯಕ್ಕಾಗಿ ಪ್ರಾಣತೆತ್ತು ಹುತಾತ್ಮರಾದವರ ಸ್ಮರಣಾರ್ಥವಾಗಿ ಪ್ರತಿವರ್ಷ ಜನವರಿ 30ರಂದು ಮೌನ ಆಚರಿಸುವ ಬಗ್ಗೆ.

ಭಾರತದ ಸ್ವಾತಂತ್ರ್ಯ ಸಂಗ್ರಾಮದಲ್ಲಿ ಪ್ರಾಣತೆತ್ತು ಹುತಾತ್ಮರಾದವರ ಸ್ಮರಣಾರ್ಥವಾಗಿ ಪ್ರತಿವರ್ಷ ಜನವರಿ 30ರಂದು, ಪೂರ್ವಾಹ್ನ 11.00 ಘಂಟೆಗೆ ಎಲ್ಲಾ ಕೆಲಸ ಕಾರ್ಯಗಳನ್ನು ಹಾಗೂ ಚಲನೆಯನ್ನು ಸ್ಥಗಿತಗೊಳಿಸಿ ಮೌನ ಆಚರಿಸುವಾಗ ಅನುಸರಿಸಬೇಕಾದ ಕ್ರಮಗಳ ಬಗ್ಗೆ ಪ್ರತಿ ವರ್ಷವೂ ಸೂಚನೆಗಳನ್ನು ನೀಡಲಾಗುತ್ತಿದೆ. ಹುತಾತ್ಮರ ಸ್ಮರಣಾರ್ಥವಾಗಿ ಜನವರಿ 30ರಂದು ನಡೆಸುವ ಮೌನ ಆಚರಣೆಗೆ ಭಾರತ ಸರ್ಕಾರದ ಸೂಚನೆಗಳಂತೆ ಸ್ಥಾಯಿಸೂಚನೆಗಳನ್ನು ನೀಡಲಾಗಿದೆ.

1. ಜನವರಿ 30ರಂದು ಪೂರ್ವಾಹ್ನ 11.00 ಘಂಟೆಗೆ ರಾಜ್ಯದೆಲ್ಲೆಡೆ ಎಲ್ಲಾ ಕೆಲಸ ಕಾರ್ಯಗಳನ್ನು ಮತ್ತು ಚಲನೆಯನ್ನು ಸ್ಥಗಿತಗೊಳಿಸಿ 2 ನಿಮಿಷಗಳ ಕಾಲ ಮೌನ ಆಚರಿಸುವುದು.

2. ಎಲ್ಲಿ ಸೈರನ್‌ಗಳು ಅಥವಾ ಸೈನಿಕರ ಬಂದೂಕುಗಳು ಲಭ್ಯ ಇವೆಯೋ ಅಂತಹ ಕಡೆಗೆ ಎರಡು ನಿಮಿಷಗಳು ಮೌನ ಆಚರಣೆಯ ಕಾಲವನ್ನು ಪ್ರಾರಂಭ ಮತ್ತು ಮುಕ್ತಾಯಕ್ಕೆ ಸೈರನ್ ಅಥವಾ ಸೈನಿಕರ ಬಂದೂಕುಗಳ ಶಬ್ಧದ ಮೂಲಕ ಎರಡು ನಿಮಿಷ ಮೌನ ಆಚರಣೆ ಪೂರ್ವಾಹ್ನ 10.59 ರಿಂದ 11.00 ಘಂಟೆಯವರೆಗೆ ಸೈರನ್ : ಬಂದೂಕು ಶಬ್ಧ ಮಾಡಿಸುವುದು ಹಾಗೂ ಎರಡು ನಿಮಿಷದ ಮೌನ ಆಚರಣೆ ನಂತರ ಪುನಃ 11.02 ರಿಂದ 11.03 ನಿಮಿಷದವರೆಗೆ ಸೈರನ್ ಶಬ್ದವನ್ನು ಮಾಡಿಸುವುದು. ಈ ಪದ್ಧತಿಯನ್ನು ಸೈರನ್ ಸೌಲಭ್ಯವಿರುವ ಕಡೆ ಅಳವಡಿಸಿಕೊಳ್ಳುವುದು.

3. ಶಬ್ದವು (ಎಲ್ಲಿ ಲಭ್ಯ ಇದೆಯೋ ಅಲ್ಲಿ) ಕೇಳಿದ ಕೂಡಲೇ ಅಲ್ಲಿ ವ್ಯಕ್ತಿಗಳು ಆರಂಭದ ಸೂಚನೆಗಾಗಿ ನಿಂತುಕೊಳ್ಳಬೇಕು ಮತ್ತು ಮೌನವನ್ನು ಆಚರಿಸಬೇಕು. ಪ್ರತಿಯೊಬ್ಬ ವ್ಯಕ್ತಿಯು ತನ್ನ ಕೊಠಡಿಯಲ್ಲಿ ಅಥವಾ ಇತರೆ ಯಾವುದೇ ಸ್ಥಳದಲ್ಲಿ ನಿಂತುಕೊಂಡು ಮೌನ ಆಚರಿಸುವುದಕ್ಕಿಂತ, ಒಂದು ವೇಳೆ ವ್ಯಕ್ತಿಗಳು ಒಂದು ಸ್ಥಳದಲ್ಲಿ ಮೌನ ಆಚರಿಸಿದರೆ ಅದು ತುಂಬಾ ಪರಿಣಾಮಕಾರಿಯಾಗಿ ಮತ್ತು ಪ್ರಭಾವಕಾರಿ (effective and impressive) ಆಗುತ್ತದೆ. ಆದಾಗ್ಯೂ ಕೆಲಸ ಕಾರ್ಯಗಳಿಗೆ ತೀವ್ರ ತೊಂದರೆ ಆಗುವಂತೆ ಇದ್ದರೆ ಮೇಲೆ ತಿಳಿಸಿದಂತೆ ಒಂದೇ ಸ್ಥಳದಲ್ಲಿ ಸೇರಲು ಪ್ರಯತ್ನಿಸದೇ ಇರಬಹುದು. ಈ 2 ನಿಮಿಷದಲ್ಲಿ ಎಲ್ಲಾ ವರ್ಕ್‌ಶಾಪ್‌ಗಳು ಮತ್ತು ಕಾರ್ಖಾನೆಗಳು ಕೆಲಸ ಸ್ಥಗಿತಗೊಳಿಸಬೇಕು. ಈ 2 ನಿಮಿಷದ ಅವಧಿಯಲ್ಲಿ ವರ್ಕ್‌ಶಾಪ್‌ಗಳು ಕಾರ್ಖಾನೆಗಳು ಪ್ರಸಾರ ಮಾಡುವುದನ್ನು ನಿಲ್ಲಿಸಬೇಕು ಮತ್ತು ರಸ್ತೆಗಳಲ್ಲಿ ಸಂಚಾರ ಸ್ಥಗಿತಗೊಳಿಸಬೇಕು. ವಿಮಾನಗಳು, ಹಡಗುಗಳು, ರೈಲುಗಳು ಹೊರಡಲು 11.00A.M. ನಿಗಧಿಪಡಿಸಿದ್ದಲ್ಲಿ ಅಂತವುಗಳನ್ನು ಆಯಾ ನಿಲ್ದಾಣಗಳಲ್ಲಿ 2 ನಿಮಿಷಗಳು ತಡೆ ಹಿಡಿಯಬೇಕು.

4. ಸಂಕೇತ (Signal) ವ್ಯವಸ್ಥೆ ಇರದಂತಹ ಪ್ರದೇಶದಲ್ಲಿ 11.00A.M.ಗೆ 2ನಿಮಿಷಗಳ ಮೌನ ಆಚರಿಸಲು ಸಂಬಂಧಪಟ್ಟವರಿಗೆಲ್ಲ ಸೂಕ್ತ ನಿರ್ದೇಶನವನ್ನು ಕಳುಹಿಸುವುದು.

5. ಇಲಾಖಾ ಮುಖ್ಯಸ್ಥರು ಮತ್ತು ಜಿಲ್ಲಾಧಿಕಾರಿಗಳು ವಿವರವಾದ ಕಾರ್ಯಕ್ರಮಗಳನ್ನು ರೂಪಿಸುವ ಸಂಪೂರ್ಣ ಜವಾಬ್ದಾರಿಯುಳ್ಳವರಾಗಿರುತ್ತಾರೆ (dis-oreation) 10.44 A.M. ರಿಂದ 10.56 A.M. ವರೆಗೆ (1) "ಸುಮಿರನ ಕರಲೆ ಮೇರೆ ಮನ್" (2) "ವೈಷ್ಣವೋ ಜನತೋ ತೇನೇ ಕಹಿಯೇ" ಮತ್ತು "ರಘುಪತಿ ರಾಘವ ರಾಜಾರಾಂ" ಈ ಕ್ರಮದಲ್ಲಿ 3 ಭಜನೆಗಳನ್ನು ಹಾಡಬೇಕು ಮತ್ತು ಈ ಕಾರ್ಯಕ್ರಮವು ಸಮಾರಂಭದ ಭಾಗ ಆಗಬಹುದು.

6. ಶಬ್ಧ ಮಾಡುವ ಬಗ್ಗೆ ಬಂದೂಕು ಹೊಡೆಯುವುದರಿಂದ ಅಥವಾ Siron ಗಳನ್ನು ಬೆಂಗಳೂರಿನಲ್ಲಿ ಮತ್ತು ಜಿಲ್ಲಾ ಕೇಂದ್ರಗಳಲ್ಲಿ ಮತ್ತು ಇತರೆ ನಗರ ಪಟ್ಟಣಗಳಲ್ಲಿ ಸಾಧ್ಯವಾದಷ್ಟು ಮಟ್ಟಿಗೆ ಸೂಕ್ತ ವ್ಯವಸ್ಥೆಗಳನ್ನು ಕರ್ನಾಟಕ ರಾಜ್ಯದ ಆರಕ್ಷಕ ಮಹಾನಿರೀಕ್ಷಕರು ಕ್ರಮ ತೆಗೆದುಕೊಳ್ಳುವುದು.

2. ಕೆಲವು ಕಚೇರಿಗಳಲ್ಲಿ ಈ 2 ನಿಮಿಷಗಳ ಮೌನ ಆಚರಣೆಯನ್ನು ಮಾಡುತ್ತಿರುವಾಗ ಸಾಮಾನ್ಯ ಜನತೆ ಈ ಮೌನ ಆಚರಣೆ ಸಂದರ್ಭದ ಪಾವಿತ್ರ್ಯತೆಯನ್ನು ಗಮನದಲ್ಲಿ ಇಡದೇ ತನ್ನ ಕಾರ್ಯದಲ್ಲಿ ನಿರತವಾಗುವುದನ್ನು ಗಮನಿಸಲಾಗಿದೆ. ಆದುದರಿಂದ ಹುತಾತ್ಮರ ದಿನಾಚರಣೆಗೆ ಸೂಕ್ತವಾಗಿ ಸಲ್ಲಿಸಬೇಕಾದ ಪಾವಿತ್ರ್ಯತೆ ಮತ್ತು ಸಾಮಾನ್ಯ ಜನತೆಯು ಭಾಗವಹಿಸುವುದರೊಡನೆ ಈ ಹುತಾತ್ಮರ ದಿನಾಚರಣೆಯನ್ನು ತಪ್ಪದೇ ಆಚರಿಸಬೇಕಾಗಿರುವ ಎಲ್ಲಾ ಕಾರ್ಯಕ್ರಮಗಳನ್ನು ಕೈಗೊಳ್ಳಬೇಕೆಂದು ಸಂಬಂಧಪಟ್ಟ ಎಲ್ಲಾ ಪ್ರಾಧಿಕಾರಗಳಿಗೆ ಸೂಚಿಸಲಾಗಿದೆ. ಈ ಉದ್ದೇಶಕ್ಕಾಗಿ ಕೆಳಕಂಡ ಕ್ರಮಗಳನ್ನು ಕೈಗೊಳ್ಳಬೇಕೆಂದು ಕೋರಲಾಗಿದೆ.

1) ಹುತಾತ್ಮರ ದಿನವನ್ನು ಪೂರ್ಣ ಪಾವಿತ್ರ್ಯತೆ ಮತ್ತು ತಕ್ಕುದಾದ (befitting) ರೀತಿಯಲ್ಲಿ ಆಚರಿಸಲು ರಾಜ್ಯದ ಎಲ್ಲಾ ವಿದ್ಯಾ ಸಂಸ್ಥೆಗಳಿಗೆ ಸೂಚನೆಗಳನ್ನು ನೀಡುವುದು. ಈ ದಿನದ ವಿಶೇಷತ್ವಕ್ಕೆ (Significance) ಸಂಬಂಧಿಸಿದಂತೆ ಭಾಷಣಗಳನ್ನು, ಅದರಲ್ಲೂ ವಿಶೇಷವಾಗಿ ಭಾರತದ ಸ್ವಾತಂತ್ರ್ಯದಲ್ಲಿ ಸ್ವಾತಂತ್ರ್ಯ ಹೋರಾಟಗಾರರ ಪಾತ್ರವನ್ನು ತಿಳಿಸುವಂತಹ ಭಾಷಣಗಳನ್ನು ಚರ್ಚೆಗಳನ್ನು (talks) ಏರ್ಪಡಿಸಬೇಕು. ಈ ಭಾಷಣಗಳ ಮುಖ್ಯಾಂಶಗಳಲ್ಲಿ ಕಷ್ಟಪಟ್ಟು ಗಳಿಸಿದ ಸ್ವಾತಂತ್ರ್ಯವನ್ನು ಉಳಿಸುವುದು, ಸಂರಕ್ಷಿಸುವುದು ಮತ್ತು ಶ್ರೀಮಂತಗೊಳಿಸುವುದಲ್ಲದೆ ರಾಷ್ಟ್ರದ ಐಕ್ಯತೆಯನ್ನು ಉತ್ತೇಜಿಸುವುದು (promote) ಮತ್ತು ಒಂದೇ ಗುರಿಗಳು ಮತ್ತು ಆದರ್ಶಗಳಿಗೆ (ideal) ಬದ್ಧರಾಗುವ ಅಂಶಗಳನ್ನೊಳಗೊಂಡಿರಬೇಕು.

2. ಭಾರತದ ಸ್ವಾತಂತ್ರ್ಯ ಹೋರಾಟದಲ್ಲಿ ಹುತಾತ್ಮರಾದವರ ಪಾತ್ರ ಮತ್ತು ರಾಷ್ಟ್ರೀಯ ಐಕ್ಯತೆಯ (National Integration) ಮೂಲ ಉದ್ದೇಶಗಳು ಇರುವ ಸಾಂಸ್ಕೃತಿಕ ಕಾರ್ಯಕ್ರಮಗಳು (Documentary) ಚಿತ್ರಗಳ ಪ್ರದರ್ಶನ : ಏಪಾರ್ಡುಗಳನ್ನು ರಾಜ್ಯದ ಪ್ರಚಾರ ಘಟಕಗಳು ಮಾಡಬಹುದು.

3. ಹುತಾತ್ಮರ ದಿನಾಚರಣೆಯನ್ನು ಸೂಕ್ತವಾಗಿ ಆಚರಿಸುವ ಬಗ್ಗೆ ತಮ್ಮ ಸದಸ್ಯರು ಹಾಗೂ ಸಂಯೋಜಿತ ಸಂಘ ಸಂಸ್ಥೆಗಳು ಹುತಾತ್ಮರ ದಿನಾಚರಣೆಯನ್ನು ಖಾತ್ರಿಯಾಗಿ ಸೂಕ್ತವಾಗಿ ಆಚರಿಸಬೇಕೆಂದು Chamber of Commerce ಮತ್ತು ಕೈಗಾರಿಕೆಗಳನ್ನು ಕೋರಬಹುದು.

3. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು, ಕಾರ್ಯದರ್ಶಿಗಳು, ಎಲ್ಲಾ ಪ್ರಾದೇಶಿಕ ಆಯುಕ್ತರು, ಇಲಾಖಾ ಮುಖ್ಯಸ್ಥರು, ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು ಮತ್ತು ಮತ್ತಿತರೆ ಸಂಬಂಧಪಟ್ಟ ಅಧಿಕಾರಿಗಳು ಮೇಲೆ ಸೂಚಿಸಿರುವ ನಿರ್ದೇಶನಗಳನ್ನು ತಕ್ಕುದಾದ ರೀತಿಯಲ್ಲಿ ಅನುಸರಿಸಲು ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಕೋರಲಾಗಿದೆ.

ಶೈಲಜಾ ಡಿ. ಬೋರ್ಕರ್
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿ.ಆ.ಸು.ಇ (ರಾಜಕೀಯ).

P.R. 76

ಕಾರ್ಮಿಕ ಅಧಿಕಾರಿ ಹಾಗೂ ಕಾರ್ಮಿಕರ ನಷ್ಟ ಪರಿಹಾರ ಆಯುಕ್ತರವರ ನ್ಯಾಯಾಲಯ, ದಾವಣಗೆರೆ ಜಿಲ್ಲೆ, ದಾವಣಗೆರೆ

ಪ್ರಕಟಣೆ

ಪ್ರ.ಸಂ :ಕಾಅದಾ/ಕಾನಪ/ಸಿ.ಆರ್–100/2012, ದಿನಾಂಕ : 2ನೇ ಜನವರಿ, 2013.

ಅರ್ಜಿದಾರರು	ಪ್ರತಿವಾದಿಗಳು
4. ಕೆ.ಸುಮಾ ಕೋಂ ಲೇಟ್ ಕೆ.ರಾಜಶೇಖರಪ್ಪ, 40ವರ್ಷ 5. ಕೆ.ಆರ್.ರಾಕೇಶ್ ಬಿನ್ ಲೇಟ್ ಕೆ.ರಾಜಶೇಖರಪ್ಪ 16ವರ್ಷ 6. ಕೆ.ಆರ್.ತೇಜಸ್ವಿನಿ ಬಿನ್ ಲೇಟ್ ಕೆ.ರಾಜಶೇಖರಪ್ಪ 12ವರ್ಷ ವಿಳಾಸ:–ಕಾರಿಗನೂರು ಗ್ರಾಮ, ಚನ್ನಗಿರಿ ತಾಲ್ಲೂಕ್ ದಾವಣಗೆರೆ ಜಿಲ್ಲೆ.	1. ಪಿ.ಪಿ.ಉಜ್ಜನಪ್ಪ ಬಿನ್ ಪಾಟೀಲ್ ರೇವಪ್ಪ ಟ್ರ್ಯಾಕ್ಟರ್ ಟ್ರೈಲರ್ ಮಾಲೀಕರು, ನಂ.ಕೆಎ–16–ಟಿ–7245–7246, ಕೆಳಗೇರೆ ಗ್ರಾಮ, ಭರಮಸಾಗರ ಹೋಬಳಿ, ಚಿತ್ರದುರ್ಗ ತಾಲ್ಲೂಕ್. 2. ದಿ. ಡಿವಿಜನಲ್ ಮೇನೇಜರ್, ಯುನೈಟೆಡ್ ಇಂಡಿಯಾ ಇನ್ಸೂರೆನ್ಸ್ ಕಂ.ಲಿ, ಪಿ.ಜೆ.ಬಡಾವಣೆ, ದಾವಣಗೆರೆ.

ಶ್ರೀಮತಿ ಕೆ.ಸುಮಾ ಕೋಂ ಲೇಟ್ ಕೆ.ರಾಜಶೇಖರಪ್ಪ, ಕೆ.ಆರ್.ರಾಕೇಶ್ ಬಿನ್ ಲೇಟ್ ಕೆ.ರಾಜಶೇಖರಪ್ಪ, ಕೆ.ಆರ್.ತೇಜಶ್ವಿನಿ ಬಿನ್ ಲೇಟ್ ಕೆ.ರಾಜಶೇಖರಪ್ಪ, ಇವರುಗಳಾದ ನಾವು ಮೃತ ಕೆ.ರಾಜಶೇಖರಪ್ಪರ ಹೆಂಡತಿ ಮತ್ತು ಮಕ್ಕಳು ಎಂದೂ ನಾವು ಮೃತ ಕೆ.ರಾಜಶೇಖರಪ್ಪ ಅವರ ಸಾವಿಗಾಗಿ ನಷ್ಟ ಪರಿಹಾರ ಕೋರಿ ಈ ನ್ಯಾಯಾಲಯದಲ್ಲಿ ಅರ್ಜಿ ಸಲ್ಲಿಸಿರುತ್ತಾರೆ. ಮೃತ ಕೆ.ರಾಜಶೇಖರಪ್ಪ ಒಂದನೇ ಪ್ರತಿವಾದಿಯವರಲ್ಲಿ ಕೂಲಿ ಆಗಿ ಕೆಲಸ ನಿರ್ವಹಿಸುತ್ತಿದ್ದಾಗ ಸಂಭವಿಸಿದ ಅಪಘಾತದಲ್ಲಿ ಮರಣ ಹೊಂದಿರುವುದಾಗಿ ಸದರಿ ಅರ್ಜಿದಾರರು ತಿಳಿಸಿರುತ್ತಾರೆ. ಈ ಸಂಬಂಧವಾಗಿ ಈ ಪ್ರಕಟಣೆಯ ಮೂಲಕ ಸಾರ್ವಜನಿಕರಿಗೆ ಮತ್ತು ಸಂಬಂಧಪಟ್ಟವರಿಗೆ ತಿಳಿಸುವುದೇನೆಂದರೆ ಈ ಬಗ್ಗೆ ಏನಾದರೂ ಆಕ್ಷೇಪಣೆಗಳಾಗಲೀ ಅಥವಾ ಬೇರೆ ಯಾರಾದರೂ ಮೃತ ಶಾಸನಬದ್ಧ ವಾರಸುದಾರರು ಎಂದು ಪರಿಗಣಿಸಬೇಕೆಂದು ಪ್ರಾರ್ಥಿಸುವುದೇನೆಂದರೆ, ಅಂತಹವರು ಪ್ರಕಟಣೆಯು ಈ ನ್ಯಾಯಾಲಯದ ನಾಮಫಲಕದಲ್ಲಿ ಪ್ರಕಟಿಸಿದ 30 ದಿನಗಳೊಳಗಾಗಿ ಅಂತಹ ಆಕ್ಷೇಪಣೆಗಳಾಗಲೀ ಅಥವಾ ಅರ್ಜಿಯನ್ನಾಗಲೀ ಈ ನ್ಯಾಯಾಲಯದಲ್ಲಿ ಸಲ್ಲಿಸತಕ್ಕದ್ದು. ಅವಧಿ ಮೀರಿ ಬಂದ ಅರ್ಜಿಗಳನ್ನು ಮಾನ್ಯ ಮಾಡಲಾಗುವುದಿಲ್ಲ.

ಸಿ.ಹೆಚ್.ಹಿರೇಗೌಡರ್,
ಕಾರ್ಮಿಕ ಅಧಿಕಾರಿ ಮತ್ತು
ಆಯುಕ್ತರು, ಕಾರ್ಮಿಕ ನಷ್ಟ ಪರಿಹಾರ
ದಾವಣಗೆರೆ ಜಿಲ್ಲೆ, ದಾವಣಗೆರೆ.

P.R. 78

ಕಾರ್ಮಿಕ ಅಧಿಕಾರಿ ಹಾಗೂ ಕಾರ್ಮಿಕರ ನಷ್ಟ ಪರಿಹಾರ ಆಯುಕ್ತರವರ ನ್ಯಾಯಾಲಯ, ದಾವಣಗೆರೆ ಜಿಲ್ಲೆ, ದಾವಣಗೆರೆ

ಪ್ರಕಟಣೆ

ಪ್ರಸಂ :ಕಾಅದಾ/ಕಾನಪ/ಸಿ.ಆರ್–01/2013, ದಿನಾಂಕ : 18ನೇ ಜನವರಿ, 2013.

ಅರ್ಜಿದಾರರು	ಪ್ರತಿವಾದಿಗಳು
1. ಜಾನಕಮ್ಮ ಕೋಂ ಲೇಟ್ ಕೆ.ಮಹೇಶ್ವರಪ್ಪ, 50ವರ್ಷ 2. ಮಂಜುಳ ತಂದೆ ಲೇಟ್ ಮಹೇಶ್ವರಪ್ಪ, 26ವರ್ಷ 3. ಜೆ.ಎಂ.ಅಣ್ಣಪ್ಪ ಬಿನ್ ಲೇಟ್ ಮಹೇಶ್ವರಪ್ಪ, 30ವರ್ಷ ವಿಳಾಸ:– # 780/7, ಐನಳ್ಳಿ ಜಿನ್ನಿಂಗ್ ಫ್ಯಾಕ್ಟರಿ ಹಿಂಭಾಗ ಆನೆಕೊಂಡ, ದಾವಣಗೆರೆ.	1. ಬಿ.ಕೆ.ಬಾಲಕೃಷ್ಣ ರಾವ್ ಬಿನ್ ಬಿ.ಎನ್ ಕೊಂಡಜ್ಜಿ ರಾವ್ ಬಸ್ ಮಾಲೀಕರು, ನಂ.ಕೆಎ-04/5896 # 55, 6ನೇ ಕ್ರಾಸ್, ದೇವರಾಜ ಅರಸ್ ಲೇಔಟ್, ಎ ಬ್ಲಾಕ್, ದಾವಣಗೆರೆ. 2. ದಿ. ಮೇನೇಜರ್, ಐ.ಸಿ.ಐ.ಸಿ.ಐ ಲಂಬಾರ್ಡ್ ಜನರಲ್ ಇನ್ಸೂರೆನ್ಸ್ ಕಂ.ಲಿ, ಪಿ.ಬಿ.ರೋಡ್, ದಾವಣಗೆರೆ.

ಶ್ರೀಮತಿ ಜಾನಕಮ್ಮ ಕೋಂ ಲೇಟ್ ಕೆ.ಮಹೇಶ್ವರಪ್ಪ, ಮಂಜುಳ ತಂದೆ ಲೇಟ್ ಮಹೇಶ್ವರಪ್ಪ, ಮತ್ತು ಜೆ.ಎಂ.ಅಣ್ಣಪ್ಪ ಬಿನ್ ಲೇಟ್ ಮಹೇಶ್ವರಪ್ಪ, ಇವರುಗಳಾದ ನಾವು ಮೃತ ದಿನೇಶ್ ಎಂ @ ರಾಕೇಶ್‌ನ ತಾಯಿ ಮತ್ತು ಸಹೋದರ ಸಹೋದರಿಯರು ಎಂದೂ ನಾವು ಮೃತ ದಿನೇಶ್ ಎಂ @ ರಾಕೇಶ್ ಅವರ ಸಾವಿಗಾಗಿ ನಷ್ಟ ಪರಿಹಾರ ಕೋರಿ ಈ ನ್ಯಾಯಾಲಯದಲ್ಲಿ ಅರ್ಜಿ ಸಲ್ಲಿಸಿರುತ್ತಾರೆ. ಮೃತ ದಿನೇಶ್ ಎಂ @ ರಾಕೇಶ್ ಒಂದನೇ ಪ್ರತಿವಾದಿಯವರಲ್ಲಿ ಚಾಲಕ ಆಗಿ ಕೆಲಸ ನಿರ್ವಹಿಸುತ್ತಿದ್ದಾಗ ಸಂಭವಿಸಿದ ಅಪಘಾತದಲ್ಲಿ ಮರಣ ಹೊಂದಿರುವುದಾಗಿ ಸದರಿ ಅರ್ಜಿದಾರರು ತಿಳಿಸಿರುತ್ತಾರೆ. ಈ ಸಂಬಂಧವಾಗಿ ಈ ಪ್ರಕಟಣೆಯ ಮೂಲಕ ಸಾರ್ವಜನಿಕರಿಗೆ ಮತ್ತು ಸಂಬಂಧಪಟ್ಟವರಿಗೆ ತಿಳಿಸುವುದೇನೆಂದರೆ, ಈ ಬಗ್ಗೆ ಏನಾದರೂ ಆಕ್ಷೇಪಣೆಗಳಾಗಲೀ ಅಥವಾ ಬೇರೆ ಯಾರಾದರೂ ಮೃತ ಶಾಸನಬದ್ಧ ವಾರಸುದಾರರು ಎಂದು ಪರಿಗಣಿಸಬೇಕೆಂದು ಪ್ರಾರ್ಥಿಸುವುದೇನೆಂದರೆ, ಅಂತಹವರು ಪ್ರಕಟಣೆಯು ಈ ನ್ಯಾಯಾಲಯದಲ್ಲಿ ನಾಮಫಲಕದಲ್ಲಿ ಪ್ರಕಟಿಸಿದ 30 ದಿನಗಳೊಳಗಾಗಿ ಅಂತಹ ಆಕ್ಷೇಪಣೆಗಳಾಗಲೀ ಅಥವಾ ಅರ್ಜಿಯನ್ನಾಗಲೀ ಈ ನ್ಯಾಯಾಲಯದಲ್ಲಿ ಸಲ್ಲಿಸತಕ್ಕದ್ದು. ಅವಧಿ ಮೀರಿ ಬಂದ ಅರ್ಜಿಗಳನ್ನು ಮಾನ್ಯ ಮಾಡಲಾಗುವುದಿಲ್ಲ.

ಸಿ.ಹೆಚ್.ಹಿರೇಗೌಡರ್,
ಕಾರ್ಮಿಕ ಅಧಿಕಾರಿ ಮತ್ತು
ಆಯುಕ್ತರು ಕಾರ್ಮಿಕ ನಷ್ಟ ಪರಿಹಾರ
ದಾವಣಗೆರೆ ಜಿಲ್ಲೆ, ದಾವಣಗೆರೆ.

P.R.79

ಇಂಧನ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಇಎನ್ 6 ಸಮನ್ವಯ 2013 , ಬೆಂಗಳೂರು, ದಿನಾಂಕ: 21ನೇ ಜನವರಿ 2013.

ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಬೆಂಗಳೂರು ಇದರ ಮೆಮೊರ್‍ಯಾಂಡಮ್ ಆಫ್ ಅಸೋಸಿಯೇಷನ್ ಮತ್ತು ಆರ್ಟಿಕಲ್ಸ್ ಆಫ್ ಅಸೋಸಿಯೇಷನ್‌ನ ಆರ್ಟಿಕಲ್ 30 (1) (ಎ) ಮತ್ತು (ಬಿ) ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಬೆಂಗಳೂರು ಇಲ್ಲಿ ಪ್ರಸ್ತುತ ಕಂಪನಿ ಸೆಕ್ರೆಟರಿ (ಕಾರ್ಯಕಾರಿ ನಿರ್ದೇಶಕ) ಆಗಿ ಸೇವೆ ಸಲ್ಲಿಸುತ್ತಿರುವ ಶ್ರೀ ಆರ್. ಶ್ರೀಧರ ಇವರನ್ನು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದ ನಿರ್ದೇಶಕ ಮಂಡಳಿಯ ನಿರ್ದೇಶಕರನ್ನಾಗಿ ಮತ್ತು ನಿರ್ದೇಶಕರು (ನಿಯಂತ್ರಣ ವ್ಯವಹಾರಗಳು) ಆಗಿ ತಕ್ಷಣದಿಂದ ಜಾರಿಗೆ ಬರುವಂತೆ ಮುಂದಿನ ಎರಡು ವರ್ಷಗಳ ಅವಧಿಗೆ ಅಥವಾ ಮುಂದಿನ ಆದೇಶದವರೆಗೆ ಇವುಗಳಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ನೇಮಕ ಮಾಡಲಾಗಿದೆ.

ನಿರ್ದೇಶಕರು (ನಿಯಂತ್ರಣ ವ್ಯವಹಾರಗಳು) ಈ ಕೆಳಕಂಡ ಕಾರ್ಯಗಳನ್ನು ನಿರ್ವಹಿಸತಕ್ಕದ್ದು.

i. To monitor, coordinate and liaise in all matters relating to legal aspects of Regulatory Affairs of KPTCL & ESCOMs.

ii. To provide quarterly Report to the respective Boards on the Status of Regulatory Affairs cases pending with various Authorities.

iii. To assist the MDs of KPTCL & ESCOMs. in the appointment of Counsel, briefing the Counsel, etc., and follow up of the matters before various Authorities

iv. To ensure that all ESCOMs. follow uniform practices and procedures in dealing with Regulatory Affairs (Legal) matters.

ಇದರೊಂದಿಗೆ ಸದರಿ ಅಧಿಕಾರಿಯನ್ನು ಎಲ್ಲಾ ಎಸ್ಕಾಂಗಳಿಗೆ Nodal Officer, Regulatory Affairs (Legal) for ESCOMs.ಎಂದು ನೇಮಕ ಮಾಡಿ ಸದರಿ 5 ESCOMsಗಳ ನಿರ್ದೇಶಕ ಮಂಡಳಿ ಸಭೆಗಳಲ್ಲಿ ವಿಶೇಷ ಆಹ್ವಾನಿತರಾಗಿ ಭಾಗವಹಿಸಲು ಎಲ್ಲಾ ಎಸ್ಕಾಂಗಳು ಅಗತ್ಯ ಕ್ರಮ ವಹಿಸುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಎ.ಎ.ಚಪ್ಪರಬಂದ್,
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.

P.R. 80

ಕಾರ್ಮಿಕ ಅಧಿಕಾರಿ ಹಾಗೂ ಕಾರ್ಮಿಕರ ನಷ್ಟ ಪರಿಹಾರ ಆಯುಕ್ತರವರ ನ್ಯಾಯಾಲಯ, ಉಪ ವಿಭಾಗ–1, ಬಳ್ಳಾರಿ.

ಪ್ರಕಟಣೆ

ಪ್ರ.ಸಂ :ಕಾಅಬ–1/ಕಾನಪ/ಸಿ.ಆರ್–170/2012, ದಿನಾಂಕ : 03ನೇ ಜನವರಿ, 2013.

ಅರ್ಜಿದಾರರು	ಪ್ರತಿವಾದಿಗಳು
1. ಶ್ರೀಮತಿ ಮಂಜುಳ ಗಂಡ ದಿ॥ ತಿಮ್ಮಪ್ಪ ಕಬೀರ @ ತಿಮ್ಮಣ್ಣ, ವಯಸ್ಸು 29 ವರ್ಷ ಗೃಹಿಣಿ [ಮೃತನ ಹೆಂಡತಿ] 2. ಕಿರಣ ತಂದೆ ದಿ॥ ತಿಮ್ಮಪ್ಪ ಕಬೀರ @ ತಿಮ್ಮಣ್ಣ, ವಯಸ್ಸು 6 ವರ್ಷ [ಮೃತನ ಅಪ್ರಪ್ತಾ ವಯಸ್ಸಿನ ಮಗ] 3. ಕೀರ್ತಿ ತಂದೆ ದಿ॥ ತಿಮ್ಮಪ್ಪ ಕಬೀರ @ ತಿಮ್ಮಣ್ಣ, ವಯಸ್ಸು 4 ವರ್ಷ [ಮೃತನ ಅಪ್ರಪ್ತಾ ವಯಸ್ಸಿನ ಮಗ] 4. ಗೋವಿಂದ ತಂದೆ ದಿ॥ ತಿಮ್ಮಪ್ಪ ಕಬೀರ @ ತಿಮ್ಮಣ್ಣ, ವಯಸ್ಸು 4 ವರ್ಷ [ಮೃತನ ಅಪ್ರಪ್ತಾ ವಯಸ್ಸಿನ ಮಗ] 5. ಕಬೀರ ಶಿವನ್ನ ತಂದೆ ದಿ॥ ತಿಮ್ಮಪ್ಪ, ವಯಸ್ಸು 60 ವರ್ಷ [ಮೃತನ ತಂದೆ] ವಾಸ : ಹಳ್ಳಿ ಮಲಪನ ಗುಡಿ ಗ್ರಾಮ ಹೊಸಪೇಟೆ ತಾಲ್ಲೂಕು ಬಳ್ಳಾರಿ ಜಿಲ್ಲೆ.	1. ರಮೇಶ್ ತಂದೆ ದುರುಗಪ್ಪ, ಮಾಲೀಕರು ಟ್ರಾಕ್ಟರ್ ಟೇಲರ್ ಸಂಖ್ಯೆ: ಕೆಎ–35/ಎ೦9064. ವಾಸ: ಮನೆ ನಂ–70/1 ಜನತಾ ಪ್ಲಾಟ್, ಮಲಪನ ಗುಡಿ, ಹೊಸಪೇಟೆ. 2. ಮಡ್ಡಿ ವೆಂಕೋಬ ತಂದೆ ಎಸ್. ನಾಗಪ್ಪ, ಮಾಲೀಕರು ಟ್ರಾಕ್ಟರ್ ಟೇಲರ್ ಸಂಖ್ಯೆ: ಕೆಎ–35/ಟಿ–7497. ವಾಸ: ವಡ್ಡರಹಳ್ಳಿ ಗ್ರಾಮ ಹೊಸಪೇಟೆ. 2. ದಿ. ಡಿವಿಜನಲ್ ಮ್ಯಾನೇಜರ್ ಮೆ॥ ಶ್ರೀರಾಂ ಜನರಲ್ ಇನ್ಸೂರೆನ್ಸ್ ಕಂಪನಿ ಲಿಮಿಟೆಡ್. ಇ–8 ಇಪಿಐಪಿ ಆರೈಸಿಸಿಓ ಇಂಡಸ್ಟ್ರಿಯಲ್ ಏರಿಯಾ ಸೀತಾಪುರ, ಜೈಪುರ, ರಾಜಸ್ಥಾನ್ – 302022

ಈ ಮೇಲೆ ತಿಳಿಸಿದ (1 ರಿಂದ 5) ಅರ್ಜಿದಾರರು ಮೃತನ ವಾರಸುದಾರರಾಗಿದ್ದು, ಮೃತ ತಿಮ್ಮಪ್ಪ ಕಬೀರ @ ತಿಮ್ಮಣ್ಣ, 1ನೇ ಪ್ರತಿವಾದಿಯ ವಾಹನದಲ್ಲಿ ಚಾಲಕನಾಗಿ ಕೆಲಸ ನಿರ್ವಹಿಸುತ್ತಿದ್ದು , 1ನೇ ಪ್ರತಿವಾದಿಯ ಆದೇಶದ ಮೇರೆಗೆ ದಿನಾಂಕ: 15–05–2012 ರಂದು ಮಲಪನ ಗುಡಿಯಿಂದ ಹಿಂತಿರುಗುವಾಗ ಪಿಂಜಾರ ಹಡಗಲಿ ಗ್ರಾಮ ಹತ್ತಿರ ನಿಯಂತ್ರಣ ತಪ್ಪಿ ರಸ್ತೆಯ ಪಕ್ಕದಲ್ಲಿ ತಗ್ಗಿನಲ್ಲಿ ಬಿದ್ದು ಅಪಘಾತ ಸಂಭವಿಸಿ ಮೃತಪಟ್ಟಿದ್ದಾನೆಂದು ತಿಳಿಸಿ ತಾವು ಮೃತನ ವಾರಸುದಾರರು ಹಾಗೂ ಅವಲಂಬಿತರೆಂದು ನಷ್ಟ ಪರಿಹಾರ ಕೋರಿ ದಾವಾ ಅರ್ಜಿಯನ್ನು ಸಲ್ಲಿಸಿರುತ್ತಾರೆ.

ಈ ಸಂಬಂಧವಾಗಿ ಸಾರ್ವಜನಿಕರಿಗೂ ಹಾಗೂ ಸಂಬಂಧೀಕರಿಗೂ ತಿಳಿಯಪಡಿಸುವುದೇನೆಂದರೆ ಮೃತನ ವಾರಸುದಾರರು, ಅವಲಂಬಿತರು ಎಂದು ಪರಿಗಣಿಸಬೇಕೆಂದು ಬೇರೆ ಯಾರಾದರೂ ಕೋರುವುದಾದರೆ ಅಂಥವರು ಈ ಪ್ರಕಟಣೆಯನ್ನು ಕರ್ನಾಟಕ ರಾಜ್ಯ ಸರ್ಕಾರಿ ಹೊರವಲಯ ಮುದ್ರಣಾಲಯ, ಬೆಂಗಳೂರು ಹಾಗೂ ಈ ನ್ಯಾಯಾಲಯದ ನಾಮಫಲಕದಲ್ಲಿ ಪ್ರಕಟಿಸಿದ 30 ದಿನಗಳೊಳಗೆ ತಮ್ಮ ಆಕ್ಷೇಪಣೆಗಳೇನಾದರೂ ಇದ್ದಲ್ಲಿ ತಿಳಿಸತಕ್ಕದ್ದು, ಅವಧಿ ಮೀರಿ ಬಂದ ಅರ್ಜಿಗಳನ್ನು ಮಾನ್ಯ ಮಾಡಲಾಗುವುದಿಲ್ಲ.

ಕಾರ್ಮಿಕಾಧಿಕಾರಿ ಮತ್ತು
ಕಾರ್ಮಿಕ ನಷ್ಟ ಪರಿಹಾರ ಆಯುಕ್ತರು,
ಬಳ್ಳಾರಿ ಉಪ ವಿಭಾಗ–1, ಬಳ್ಳಾರಿ

P.R.98

ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ ಇವರ ನ್ಯಾಯಾಲಯದಲ್ಲಿ

ಬಿ3:ಅಮೊ:ವಾಹನ:ವಿವ:36/11-12, ದಿನಾಂಕ:06-10-2012

ಉಪಸ್ಥಿತರು : ಆರ್.ರವಿಶಂಕರ್, ಭಾ.ಅ.ಸೇ., ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ

ಫಿರ್ಯಾಧಿದಾರರು : ವಲಯ ಅರಣ್ಯಾಧಿಕಾರಿ, ಸಾಗರ ವಲಯ, ಸಾಗರ (ಸಹಾಯಕ ಸರ್ಕಾರಿ ಅಭಿಯೋಜಕರು)

ಬಾಧ್ಯತೆದಾರರು : ಯಾರು ಕ್ಲೇಮು ಅರ್ಜಿ ಸಲ್ಲಿಸಿರುವುದಿಲ್ಲ.

ಪ್ರಸ್ತಾವನೆ:-

ದಿ:12-12-2011ರಂದು ಮಾರುತಿ ವ್ಯಾನ್ ಜಿಎ-01-ಪಿ-0235ರಲ್ಲಿ ಬೀಟೆ ನಾಟಾ ಅಕ್ರಮವಾಗಿ ಸಾಗಿಸುತ್ತಿರುವಾಗ ತ್ಯಾಗರ್ತಿ ಶಾಖೆ ವನಪಾಲಕ ಪತ್ತೆಹಚ್ಚಿ ಬರೆದ ಮಹಜರ್ ಈ ಕೆಳಗಿನಂತಿದೆ.

ದಿ:12-12-2011 ರಂದು ಸಾಗರ ವಲಯದ ತ್ಯಾಗರ್ತಿ ಶಾಖೆಯ ವನಪಾಲಕ ಮತ್ತು ಸಿಬ್ಬಂದಿಯವರಿಗೆ ಬಂದ ಖಚಿತ ವರ್ತಮಾನದ ಮೇರೆಗೆ ಸಾಗರ ತಾ. ಕಸಬ ಹೋಬಳಿ ತ್ಯಾಗರ್ತಿಯಿಂದ ಶಿರಾಳಕೊಪ್ಪಕ್ಕೆ ಹೋಗುವ ರಸ್ತೆಯಲ್ಲಿ ಜಂಬಾನಿ ಕ್ರಾಸ್ ಹತ್ತಿರ ಎಂದಿನಂತೆ ರಾತ್ರಿ ಕಾಯುತ್ತಿರುವಾಗ ಬೆಳಗಿನ ಜಾವ 4.00 ಗಂಟೆ ಸಮಯದಲ್ಲಿ ಜಂಬಾನಿ ಕಡೆಯಿಂದ ಒಂದು ಮಾರುತಿ ವ್ಯಾನ್‌ನ್ನು ಬ್ಯಾಟರಿ ಬೆಳಕಿನ ಸಹಾಯದಿಂದ ನಿಲ್ಲಿಸಲು ಸೂಚಿಸಿದಾಗ ಇಲಾಖೆಯವರಿಂದ 60 ಅಡಿ ದೂರದಲ್ಲಿ ವಾಹನ ನಿಲ್ಲಿಸಿ ವಾಹನದಲ್ಲಿದ್ದ ಆಸಾಮಿಗಳು ವಾಹನದಿಂದ ಇಳಿದು ಕೈಗೇ ಸಿಗದೇ ಪರಾರಿಯಾಗಿರುತ್ತಾರೆ. ನಂತರ ವಾಹನ ಪರಿಶೀಲಿಸಲಾಗಿ ಅದು ಮಾರುತಿ ವ್ಯಾನ್ ಜಿಎ-01-ಪಿ-0235 ಆಗಿದ್ದು, ಈ ವಾಹನದೊಳಗಡೆ 2 ಬೀಟೆ ನಾಟಾಗಳಿದ್ದು ಅವುಗಳನ್ನು ಅಳತೆ ಮಾಡಲಾಗಿ 0.106ಎಂ3 ಪ್ರಮಾಣವಿರುತ್ತದೆ. ಈ ತುಂಡುಗಳ ಮೇಲೆ ಇಲಾಖಾ ಛಾಪಾದ ಗುರುತಿರಲಿಲ್ಲ ಹಾಗೂ ಸಾಗಿಸಲು ರಹದಾರಿ ಇರಲಿಲ್ಲವಾದ್ದರಿಂದ ಇದು ಅಕ್ರಮ ಸಾಗಾಣಿಕೆ ಎಂದು ಪರಿಗಣಿಸಿ ವಾಹನ ಮತ್ತು ಅರಣ್ಯ ಉತ್ಪನ್ನವನ್ನು ಪ್ರಥಮ ವರ್ತಮಾನ ವರದಿ, ಮಹಜರ್ ವರದಿ, ಜಪ್ತು ವರದಿಯೊಂದಿಗೆ ಇಲಾಖಾ ಪರ ಜಪ್ತುಪಡಿಸಿಕೊಂಡು ಕರ್ನಾಟಕ ಅರಣ್ಯ ಕಾಯಿದೆ 1963 ಸೆಕ್ಷನ್ 33, 62, 71(ಎ), 104(ಎ) ಮತ್ತು ಕರ್ನಾಟಕ ಅರಣ್ಯ ಕಾನೂನು 1969 ಉಪನಿಯಮ 144, 165ರ ಪ್ರಕಾರ ತ್ಯಾಗರ್ತಿ ಶಾಖೆ ವನಪಾಲಕರು ಅರಣ್ಯ ಮೊಕದ್ದಮೆ ಸಂಖ್ಯೆ:68/11-12ನ್ನು ದಾಖಲಿಸಿರುತ್ತಾರೆ. ನಂತರ ವಾಹನ ಮತ್ತು ಅರಣ್ಯ ಉತ್ಪನ್ನವನ್ನು ವಲಯ ಅರಣ್ಯಾಧಿಕಾರಿ, ಸಾಗರ ವಲಯ ಇವರ ಸಮಕ್ಷಮ ಹಾಜರ್ಪಡಿಸಿರುತ್ತಾರೆ.

ವಲಯ ಅರಣ್ಯಾಧಿಕಾರಿ, ಸಾಗರ ವಲಯ ಇವರು ಈ ವಾಹನ ಮತ್ತು ಎಲ್ಲಾ ದಾಖಲೆಗಳನ್ನು ಈ ನ್ಯಾಯಾಲಯಕ್ಕೆ ಹಾಜರ್ಪಡಿಸಿರುತ್ತಾರೆ. ಈ ವಾಹನವನ್ನು ಸಾಗರದ ಸರ್ಕಾರಿ ನಾಟಾ ಸಂಗ್ರಹಾಲಯದಲ್ಲಿರುವ ವಾಹನ ಶೆಡ್ಡಿನಲ್ಲಿ ಸುರಕ್ಷತೆಗಾಗಿ ಇಡಲು ವಲಯ ಅರಣ್ಯಾಧಿಕಾರಿ, ಸರ್ಕಾರಿ ನಾಟಾ ಸಂಗ್ರಹಾಲಯ, ಸಾಗರ ಇವರ ಸುಪರ್ಧಿಗೆ ಕೊಡಲು ಈ ನ್ಯಾಯಾಲಯದಿಂದ ಆದೇಶವಾಗಿದೆ.

ಈ ವಾಹನದ 'ಬಿ' ಎಕ್ಸ್‌ಟ್ರ್ಯಾಕ್ಟ್‌ನ್ನು ಈ ನ್ಯಾಯಾಲಯಕ್ಕೆ ಒದಗಿಸಲು ಈ ನ್ಯಾಯಾಲಯದಿಂದ ಬಿ3-ಅಮೊ-ವಾಹನ-ವಿವ-36/11-12 ದಿ:19-12-2011ರಂದು "The Director of Transport Commission, Panaji, Goa" ಇವರಿಗೆ ಪತ್ರ ಬರೆದು ಕೋರಲಾಯಿತು. ಆದರೆ ಸಾರಿಗೆ ಅಧಿಕಾರಿ, ಗೋವಾ ಇವರು ಈ ನ್ಯಾಯಾಲಯಕ್ಕೆ ಈ ವಾಹನದ 'ಬಿ' ಎಕ್ಸ್‌ಟ್ರ್ಯಾಕ್ಟ್‌ನ್ನು ಇಲ್ಲಿಯವರೆಗೆ ಒದಗಿಸಿರುವುದಿಲ್ಲ. ಇದರಿಂದ ಈ ವಾಹನದ ಆರ್.ಸಿ.ಮಾಲೀಕರಿಗೆ ಕರ್ನಾಟಕ ಅರಣ್ಯ ಕಾಯಿದೆ 1963 ಸೆಕ್ಷನ್ 71(ಬಿ)(I)ರ ಪ್ರಕಾರ ನೋಟೀಸ್ ಜಾರಿ ಮಾಡಲು ಸಾಧ್ಯವಾಗಿರುವುದಿಲ್ಲ.

ಈ ನಡುವೆ ಈ ವಾಹನದ ಪ್ರಚಾರಕ್ಕಾಗಿ ಈ ನ್ಯಾಯಾಲಯದಿಂದ ಬಿ3-ಅಮೊ-ವಾಹನ-ಪ್ರಕಟಣೆ-ಸಿಆರ್-33/11-12 ದಿ:17-01-2012ರಂದು ಪ್ರಕಟಣೆ ಹೊರಡಿಸಿರುತ್ತದೆ. ಈ ಪ್ರಕಟಣೆಯ ಪ್ರತಿಯನ್ನು ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯ ಪತ್ರ ವಿಭಾಗ, ಬೆಂಗಳೂರು ಮತ್ತು ವಾರ್ತಾ ಮತ್ತು ಪ್ರಚಾರ ಇಲಾಖೆ, ಬೆಂಗಳೂರು ಇವರಿಗೆ ಕಳುಹಿಸಿ ಗೆಜೆಟ್ ಮತ್ತು ದಿನಪತ್ರಿಕೆಯಲ್ಲಿ ಪ್ರಕಟಿಸಲು ಕೋರಲಾಯಿತು. ಅದರಂತೆ, ದಿ:04-02-2012ರಂದು ವಿಜಯ ಕರ್ನಾಟಕ ದಿನಪತ್ರಿಕೆಯಲ್ಲಿ ಮತ್ತು ದಿ:22-03-2012 ರಂದು ರಾಜ್ಯ ಗೆಜೆಟ್ ಪತ್ರಿಕೆಯಲ್ಲಿ ಈ ಪ್ರಕಟಣೆಯು ಪ್ರಕಟಗೊಂಡಿರುತ್ತದೆ. ಪತ್ರಿಕೆಯಲ್ಲಿ ಪ್ರಕಟಗೊಂಡು 30 ದಿನಗಳಾದರೂ ವಾಹನ ಮಾಲೀಕರಾಗಲೀ ಅವರ ಪರ ವಕೀಲರಾಗಲೀ ಈ ನ್ಯಾಯಾಲಯಕ್ಕೆ ಕ್ಲೇಮು ಅರ್ಜಿಯನ್ನು ಸಲ್ಲಿಸಿರುವುದಿಲ್ಲ.

ಸಹಾಯಕ ಸರ್ಕಾರಿ ಅಭಿಯೋಜಕರು ದಿ:01-09-2012ರಂದು ವಾದ ಮಂಡಿಸಿ, ಸದರಿ ವಾಹನದಲ್ಲಿ ಅರಣ್ಯ ಉತ್ಪನ್ನವನ್ನು ಸಾಗಿಸುತ್ತಿರುವಾಗ ಮಾಲು ಸಹಿತ ಸಾಗರ ವಲಯದ ತ್ಯಾಗರ್ತಿ ಶಾಖಾ ವನಪಾಲಕರು ಮತ್ತು ಸಿಬ್ಬಂದಿಯವರು ಪತ್ತೆಹಚ್ಚಿ ಕ್ರಿಮಿನಲ್ ಕೇಸ್ ದಾಖಲಿಸಿರುತ್ತಾರೆ. ಕೇಸ್ ದಾಖಲಿಸಿದ ಬಗ್ಗೆ ಪ್ರಥಮ ವರ್ತಮಾನ ವರದಿ, ಜಪ್ತು ವರದಿಯನ್ನು ವಲಯ ಅರಣ್ಯಾಧಿಕಾರಿ, ಸಾಗರ ವಲಯ ಇವರು ಈ ನ್ಯಾಯಾಲಯಕ್ಕೆ ಸಲ್ಲಿಸಿರುತ್ತಾರೆ. ಇದರಿಂದ ಈ ವಾಹನದಲ್ಲಿ ಬೀಟೆ ನಾಟಾಗಳನ್ನು ಅಕ್ರಮವಾಗಿ ಸಾಗಿಸಲು ಉಪಯೋಗಿಸಿರುವುದು ಸಾಬೀತಾಗಿರುತ್ತದೆ. ಆದ್ದರಿಂದ ವಾಹನ ಮತ್ತು ಅರಣ್ಯ ಉತ್ಪನ್ನವನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಕೋರಿರುತ್ತಾರೆ.

ಈ ಪ್ರಕರಣದ ಎಲ್ಲಾ ದಾಖಲೆಗಳನ್ನು ಪರಿಶೀಲಿಸಿ, ಅಭಿಯೋಜಕರ ವಾದವನ್ನು ಕೇಳಿದೆ. ಹಾಗೂ ಈ ವಾಹನದ ಬಗ್ಗೆ ಪತ್ರಿಕಾ ಪ್ರಕಟಣೆ ಹೊರಡಿಸಿರುತ್ತದೆ. ಈ ಪ್ರಕಟಣೆಯು ರಾಜ್ಯ ಗೆಜೆಟ್‌ನಲ್ಲಿ ಮತ್ತು ದಿನಪತ್ರಿಕೆಯಲ್ಲಿ ಪ್ರಕಟಗೊಂಡು 30 ದಿನಗಳಾದರೂ ಯಾರೂ ಹಕ್ಕು ಬಾಧ್ಯತೆಯ ಅರ್ಜಿಯನ್ನು ಈ ನ್ಯಾಯಾಲಯಕ್ಕೆ ಸಲ್ಲಿಸದೇ ಇದ್ದುದ್ದರಿಂದ ಈ ಪ್ರಕರಣದ ವಿದ್ಯಾಮಾನಗಳನ್ನು ಅರಿತು ಈ ಕೆಳಗಿನಂತೆ ಆದೇಶ ಹೊರಡಿಸಿದೆ.

ಆದೇಶ

ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳನ್ನು ಗಣನೆಗೆ ತೆಗೆದುಕೊಂಡು ಆರ್.ರವಿಶಂಕರ್, ಭಾ.ಅ.ಸೇ., ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ ಆದ ನಾನು, ಅರಣ್ಯ ಮೊಕದ್ದಮೆಯಲ್ಲಿ ಜಪ್ತು ಮಾಡಿದ ವಾಹನ ಮಾರುತಿ ವ್ಯಾನ್ ಜಿಎ-01-ಪಿ-0235 (ಛಾಸ್ಸಿಸ್ ನಂ: ಇಂಜಿನ್ ನಂ: Not visible) ವನ್ನು ಮತ್ತು ಈ ವಾಹನದಲ್ಲಿದ್ದ, ಬೀಟೆ ನಾಟಾ 02=0.106ಎಂ3ನ್ನು ಅಂತಿಮವಾಗಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡಿರುತ್ತೇನೆ. ಮುಟ್ಟುಗೋಲು ಹಾಕಿಕೊಂಡ ವಾಹನ ಮತ್ತು ಅರಣ್ಯ ಉತ್ಪನ್ನವನ್ನು ಸರ್ಕಾರಕ್ಕೆ ಅನುಕೂಲಕರವಾಗಿ ವಿಲೇ ಮಾಡಲು ಆದೇಶಿಸಿದ್ದೇನೆ. ಈ ಆದೇಶವನ್ನು ಹೇಳಿ ಬರೆಯಿಸಿ, ಗಣಕಯಂತ್ರದಲ್ಲಿ ಮುದ್ರಿಸಿ, ನಂತರ ಸರಿಪಡಿಸಿ **ದಿ:06-10-2012** ರಂದು ನನ್ನ ಸಹಿ ಹಾಗೂ

ಮೊಹರಿನೊಂದಿಗೆ ತೆರೆದ ನ್ಯಾಯಾಲಯದಲ್ಲಿ ಆದೇಶಿಸಿದ್ದೇನೆ. ಈ ಆದೇಶ ಹೊರಡಿಸಿದ 30 (ಮೂವತ್ತು) ದಿನಗಳ ಒಳಗಾಗಿ ಯಾರು ಮೇಲ್ಮನವಿ ಸಲ್ಲಿಸದೇ ಹೋದಲ್ಲಿ ಇದೇ ಅಂತಿಮ ಆದೇಶವಾಗಿರುತ್ತದೆ.

ಆರ್.ರವಿಶಂಕರ್
ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ,
ಸಾಗರ ವಿಭಾಗ, ಸಾಗರ

PR.14

ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ ಇವರ ನ್ಯಾಯಾಲಯದಲ್ಲಿ

ಬಿ3:ಅಮೊ:ವಾಹನ:ವಿವ:41/11-12, ದಿನಾಂಕ:06-10-2012

ಉಪಸ್ಥಿತರು : ಆರ್.ರವಿಶಂಕರ್, ಭಾ.ಅ.ಸೇ., ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ.

ಪಿರ್ಯಾಧಿದಾರರು : ವಲಯ ಅರಣ್ಯಾಧಿಕಾರಿ, ಶಿಕಾರಿಪುರ ವಲಯ, (ಸಹಾಯಕ ಸರ್ಕಾರಿ ಅಭಿಯೋಜಕರು)

ಬಾಧ್ಯತೆದಾರರು : ಯಾರು ಕ್ಲೇಮು ಅರ್ಜಿ ಸಲ್ಲಿಸಿರುವುದಿಲ್ಲ.

ಪ್ರಸ್ತಾವನೆ:-

ದಿ:21-01-2012ರಂದು ಮಾರುತಿ ವ್ಯಾನ್ ಕೆಎ-15-M-575ರಲ್ಲಿ ಬೀಟೆ ನಾಟಾ ಅಕ್ರಮವಾಗಿ ಸಾಗಿಸುತ್ತಿರುವಾಗ ಬಳೂರು ಶಾಖೆ ವನಪಾಲಕ ಪತ್ತೆಹಚ್ಚಿ ಬರೆದ ಮಹಜರ್ ಈ ಕೆಳಗಿನಂತಿದೆ.

ದಿ:21-01-2012ರಂದು ಶಿಕಾರಿಪುರ ವಲಯದ ಬಳೂರು ಶಾಖೆ ವನಪಾಲಕ ಮತ್ತು ಸಿಬ್ಬಂದಿಯವರು ಶಿಕಾರಿಪುರ ತಾ. ಹೊಸೂರು ಹೋಬಳಿ ಶಿಕಾರಿಪುರದಿಂದ ಮಾಸೂರಿಗೆ ಹೋಗುವ ರಸ್ತೆಯಲ್ಲಿ ಗಸ್ತು ತಿರುಗುತ್ತಿರುವಾಗ ಒಂದು ಮಾರುತಿ ವ್ಯಾನ್ ಬಂದಿತು. ಅದರಲ್ಲಿದ್ದ ಆಸಾಮಿಗಳು ಇಲಾಖೆಯವರನ್ನು ಸುಮಾರು 200 ಮೀಟರ್ ದೂರದಲ್ಲಿ ನೋಡಿ ವಾಹನ ನಿಲ್ಲಿಸಿ ಅದರಲ್ಲಿದ್ದ ಆಸಾಮಿಗಳು ವಾಹನದಿಂದ ಇಳಿದು ಓಡಲಾರಂಭಿಸಿದರು. ಇಲಾಖೆಯವರು ಆಸಾಮಿಗಳನ್ನು ಬೆನ್ನಟ್ಟಿದರೂ ಕೈಗೆ ಸಿಗದೆ ಪರಾರಿಯಾದರು. ನಂತರ ವಾಹನ ಹತ್ತಿರ ಹೋಗಿ ನೋಡಲಾಗಿ ವಾಹನದಲ್ಲಿ ಚಾಲಕ ಮತ್ತೊಬ್ಬ ಆಸಾಮಿ ಕುಳಿತಿದ್ದರು ಅವರ ಹೆಸರು ವಿಚಾರಿಸಲಾಗಿ 1. ಶಂಕರಚಾರಿ ಬಿನ್ ಜಯಚಾರಿ, 35 ವರ್ಷ, ಈಸೂರು ಗ್ರಾಮ, ಅಂಜನಾಪುರ ಹೋಬಳಿ, ಶಿಕಾರಿಪುರ ತಾ. 2. ಪ್ರಕಾಶ ಕೆ. ಬಿನ್ ಜಯಚಾರಿ, 36 ವರ್ಷ, ಮಲವಗೊಪ್ಪ ಗ್ರಾಮ, ಶಿವಮೊಗ್ಗ ತಾ. ಎಂದು ಮತ್ತು ಓಡಿಹೋದವರ ಹೆಸರು ಈರಪ್ಪ, 30 ವರ್ಷ, ವಿದ್ಯಾನಗರ, ಈಸೂರು ಗ್ರಾಮ, ಅಂಜನಾಪುರ ಹೋಬಳಿ, ಶಿಕಾರಿಪುರ ತಾ. ಎಂದು ತಿಳಿಸಿದರು. ನಂತರ ವಾಹನ ಪರಿಶೀಲಿಸಲಾಗಿ ಅದು ಮಾರುತಿ ವ್ಯಾನ್ ಕೆಎ-15-M-575ಆಗಿದ್ದು, ಈ ವಾಹನದಲ್ಲಿದ್ದ 56 ಬೀಟೆ ಸೈಜ್ ಅಳತೆ ಮಾಡಲಾಗಿ 0.147ಎಂ3 ಪ್ರಮಾಣವಿರುತ್ತದೆ. ಈ ತುಂಡುಗಳ ಮೇಲೆ ಇಲಾಖಾ ಛಾಪಾದ ಗುರುತಿರಲಿಲ್ಲ ಹಾಗೂ ಸಾಗಿಸಲು ರಹದಾರಿ ಇರಲಿಲ್ಲವಾದ್ದರಿಂದ ಇದು ಅಕ್ರಮ ಸಾಗಾಣಿಕೆ ಎಂದು ಪರಿಗಣಿಸಿ ಆಸಾಮಿ, ವಾಹನ ಮತ್ತು ಅರಣ್ಯ ಉತ್ಪನ್ನವನ್ನು ಪ್ರಥಮ ವರ್ತಮಾನ ವರದಿ, ಮಹಜರ್ ವರದಿ, ಜಪ್ತು ವರದಿಯೊಂದಿಗೆ ಇಲಾಖಾ ಪರ ವಶಪಡಿಸಿಕೊಂಡು ಕರ್ನಾಟಕ ಅರಣ್ಯ ಕಾಯಿದೆ 1963 ಸೆಕ್ಷನ್ 50, 62, 80, 71(ಎ)ರಿಂದ(ಜಿ), 104(ಎ) ಮತ್ತು ಕರ್ನಾಟಕ ಅರಣ್ಯ ಕಾನೂನು 1969 ಉಪನಿಯಮ 144, 165ರ ಪ್ರಕಾರ ಬಳೂರು ಶಾಖೆ ವನಪಾಲಕ ಅರಣ್ಯ ಮೊಕದ್ದಮೆ ಸಂಖ್ಯೆ:118/11-12ನ್ನು ದಾಖಲಿಸಿರುತ್ತಾರೆ. ನಂತರ ವಾಹನ ಮತ್ತು ಅರಣ್ಯ ಉತ್ಪನ್ನವನ್ನು ವಲಯ ಅರಣ್ಯಾಧಿಕಾರಿ, ಶಿಕಾರಿಪುರ ವಲಯ ಇವರ ಸಮಕ್ಷಮ ಹಾಜರ್ಪಡಿಸಿರುತ್ತಾರೆ.

ವಲಯ ಅರಣ್ಯಾಧಿಕಾರಿ, ಶಿಕಾರಿಪುರ ವಲಯ ಇವರು ಸಿಕ್ಕಿಬಿದ್ದ ಆಸಾಮಿಗಳನ್ನು ಜೆ.ಎಂ.ಎಫ್.ಸಿ, ಶಿಕಾರಿಪುರಕ್ಕೆ ಒಪ್ಪಿಸಿ, ನಂತರ ಈ ವಾಹನ ಮತ್ತು ಎಲ್ಲಾ ದಾಖಲೆಗಳನ್ನು ಈ ನ್ಯಾಯಾಲಯಕ್ಕೆ ಹಾಜರ್ಪಡಿಸಿರುತ್ತಾರೆ. ಈ ವಾಹನವನ್ನು ಸಾಗರದ ಸರ್ಕಾರಿ ನಾಟಾ ಸಂಗ್ರಹಾಲಯದಲ್ಲಿರುವ ವಾಹನ ಶೆಡ್ಡಿನಲ್ಲಿ ಸುರಕ್ಷತೆಗಾಗಿ ಇಡಲು ವಲಯ ಅರಣ್ಯಾಧಿಕಾರಿ, ಸರ್ಕಾರಿ ನಾಟಾ ಸಂಗ್ರಹಾಲಯ, ಸಾಗರ ಇವರ ಸುಪರ್ಧಿಗೆ ಕೊಡಲು ಈ ನ್ಯಾಯಾಲಯದಿಂದ ಆದೇಶವಾಗಿದೆ.

ಈ ವಾಹನದ 'ಬಿ' ಎಕ್ಸ್‌ಟ್ರ್ಯಾಕ್ಟ್‌ನ್ನು ಈ ನ್ಯಾಯಾಲಯಕ್ಕೆ ಒದಗಿಸಲು ಈ ನ್ಯಾಯಾಲಯದಿಂದ ಬಿ3-ಅಮೊ-ವಾಹನ-ವಿವ-41/11-12 ದಿ:31-01-2012ರಂದು ಸಾರಿಗೆ ಅಧಿಕಾರಿ, ಸಾಗರ ಇವರಿಗೆ ಪತ್ರ ಬರೆದು ಕೋರಲಾಯಿತು. ಅದರಂತೆ ಸದರಿ ವಾಹನದ 'ಬಿ' ಎಕ್ಸ್‌ಟ್ರ್ಯಾಕ್ಟ್‌ನ್ನು ವಲಯ ಅರಣ್ಯಾಧಿಕಾರಿ, ಶಿಕಾರಿಪುರ ಇವರು ಸಾರಿಗೆ ಅಧಿಕಾರಿ, ಸಾಗರದಿಂದ ಪಡೆದು ದಿ:15-02-2012ರಂದು ಈ ನ್ಯಾಯಾಲಯಕ್ಕೆ ಸಲ್ಲಿಸಿರುತ್ತಾರೆ. (ಪತ್ರ ಸಂ:ಶಿಕಾ.ಬಿ.ಎಕ್ಸ್‌ಟ್ರ್ಯಾಕ್ಟ್.ದಾಖ.ವಿವ.1066/11-12 ದಿ:13-02-2012) ಈ ವಾಹನದ 'ಬಿ' ಎಕ್ಸ್‌ಟ್ರ್ಯಾಕ್ಟ್‌ನಲ್ಲಿ ಆರ್.ಸಿ.ಮಾಲೀಕರ ಹೆಸರು ಕೆ.ಶಂಕರಚಾರಿ ಬಿನ್ ಕೆ.ಜಯಚಾರ್, ಈಸೂರು ವಾಸಿ ಮತ್ತು ಗ್ರಾಮ, ಶಿಕಾರಿಪುರ ತಾಲ್ಲೂಕು ಎಂದು ನಮೂದಿಸಿರುತ್ತಾರೆ. ಈ ಆರ್.ಸಿ.ಮಾಲೀಕರಿಗೆ ಕರ್ನಾಟಕ ಅರಣ್ಯ ಕಾಯಿದೆ 1963 ಸೆಕ್ಷನ್ 71(ಬಿ)(i)ರ ಪ್ರಕಾರ ನೋಟೀಸ್‌ನ್ನು ದಿ:05-03-2012ರಂದು ನೋಂದಣಿ ಅಂಚೆ ಮೂಲಕ ಜಾರಿ ಮಾಡಿದೆ. ನೋಟೀಸ್ ಆರ್.ಸಿ.ಮಾಲೀಕರಿಗೆ ಜಾರಿಮಾಡಿದ ಬಗ್ಗೆ ಅಂಚೆ ಇಲಾಖೆಯವರು ಸ್ವೀಕೃತಿ ಈ ನ್ಯಾಯಾಲಯಕ್ಕೆ ಒದಗಿಸಿರುತ್ತಾರೆ.

ಈ ನಡುವೆ ಈ ವಾಹನದ ಪ್ರಚಾರಕ್ಕಾಗಿ ಈ ನ್ಯಾಯಾಲಯದಿಂದ ಬಿ3-ಅಮೊ-ವಾಹನ-ಪ್ರಕಟಣೆ-ಸಿಆರ್-35/11-12 ದಿ:12-03-2012ರಂದು ಪ್ರಕಟಣೆ ಹೊರಡಿಸಿರುತ್ತದೆ. ಈ ಪ್ರಕಟಣೆಯ ಪ್ರತಿಯನ್ನು ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯ ಪತ್ರ ವಿಭಾಗ, ಬೆಂಗಳೂರು ಮತ್ತು ವಾರ್ತಾ ಮತ್ತು ಪ್ರಚಾರ ಇಲಾಖೆ, ಬೆಂಗಳೂರು ಇವರಿಗೆ ಕಳುಹಿಸಿ ಗೆಜೆಟ್ ಮತ್ತು ದಿನಪತ್ರಿಕೆಯಲ್ಲಿ ಪ್ರಕಟಿಸಲು ಕೋರಲಾಯಿತು. ಅದರಂತೆ, ದಿ:22-03-2012ರಂದು ವಿಜಯ ಕರ್ನಾಟಕ ದಿನಪತ್ರಿಕೆಯಲ್ಲಿ ಹಾಗೂ ದಿ:12-04-2012 ರಂದು ರಾಜ್ಯ ಗೆಜೆಟ್ ಪತ್ರಿಕೆಯಲ್ಲಿ ಈ ಪ್ರಕಟಣೆಯು ಪ್ರಕಟಗೊಂಡಿರುತ್ತದೆ. ಪತ್ರಿಕೆಯಲ್ಲಿ ಪ್ರಕಟಗೊಂಡು 30 ದಿನಗಳಾದರೂ ವಾಹನ ಮಾಲೀಕರಾಗಲೀ ಅವರ ಪರ ವಕೀಲರಾಗಲೀ ಈ ನ್ಯಾಯಾಲಯಕ್ಕೆ ಕ್ಲೇಮು ಅರ್ಜಿಯನ್ನು ಸಲ್ಲಿಸಿರುವುದಿಲ್ಲ.

ಸಹಾಯಕ ಸರ್ಕಾರಿ ಅಭಿಯೋಜಕರು ದಿ:01-09-2012ರಂದು ವಾದ ಮಂಡಿಸಿ, ಸದರಿ ವಾಹನದಲ್ಲಿ ಅರಣ್ಯ ಉತ್ಪನ್ನವನ್ನು ಸಾಗಿಸುತ್ತಿರುವಾಗ ಮಾಲು ಸಹಿತ ಬಳೂರು ಶಾಖೆ ವನಪಾಲಕ ಮತ್ತು ಇತರೆ ಸಿಬ್ಬಂದಿಯವರು ಪತ್ತೆಹಚ್ಚಿ ಕ್ರಿಮಿನಲ್ ಕೇಸ್ ದಾಖಲಿಸಿರುತ್ತಾರೆ. ಕೇಸ್ ದಾಖಲಿಸಿದ ಬಗ್ಗೆ ಪ್ರಥಮ ವರ್ತಮಾನ ವರದಿ, ಜಪ್ತು ವರದಿಯನ್ನು ವಲಯ ಅರಣ್ಯಾಧಿಕಾರಿ, ಶಿಕಾರಿಪುರ ವಲಯ ಇವರು ಈ ನ್ಯಾಯಾಲಯಕ್ಕೆ ಸಲ್ಲಿಸಿರುತ್ತಾರೆ. ಇದರಿಂದ ಈ ವಾಹನದಲ್ಲಿ ಬೀಟೆ ನಾಟಾಗಳನ್ನು ಅಕ್ರಮವಾಗಿ ಸಾಗಿಸಲು ಉಪಯೋಗಿಸಿರುವುದು ಸಾಬೀತಾಗಿರುತ್ತದೆ. ಆದ್ದರಿಂದ ವಾಹನ ಮತ್ತು ಅರಣ್ಯ ಉತ್ಪನ್ನವನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಕೋರಿರುತ್ತಾರೆ.

ಈ ಪ್ರಕರಣದ ಎಲ್ಲಾ ದಾಖಲೆಗಳನ್ನು ಪರಿಶೀಲಿಸಿ, ಅಭಿಯೋಜಕರ ವಾದವನ್ನು ಕೇಳಿದೆ. ಹಾಗೂ ಈ ವಾಹನದ ಬಗ್ಗೆ ಪತ್ರಿಕಾ ಪ್ರಕಟಣೆ ಹೊರಡಿಸಿರುತ್ತದೆ. ಈ ಪ್ರಕಟಣೆಯು ರಾಜ್ಯ ಗೆಜೆಟ್‌ನಲ್ಲಿ ಮತ್ತು ದಿನಪತ್ರಿಕೆಯಲ್ಲಿ ಪ್ರಕಟಗೊಂಡು ಮತ್ತು ಆರ್.ಸಿ.ಮಾಲೀಕರಿಗೆ ಕಾನೂನು ರೀತಿ ನೋಟೀಸ್ ಜಾರಿ ಮಾಡಿ 30 ದಿನಗಳಾದರೂ ಯಾರೂ ಹಕ್ಕು ಬಾಧ್ಯತೆಯ ಅರ್ಜಿಯನ್ನು ಈ ನ್ಯಾಯಾಲಯಕ್ಕೆ ಸಲ್ಲಿಸದೇ ಇದ್ದುದ್ದರಿಂದ ಈ ಪ್ರಕರಣದ ವಿದ್ಯಾಮಾನಗಳನ್ನು ಅರಿತು ಈ ಕೆಳಗಿನಂತೆ ಆದೇಶ ಹೊರಡಿಸಿದೆ.

ಆದೇಶ

ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳನ್ನು ಗಣನೆಗೆ ತೆಗೆದುಕೊಂಡು ಆರ್.ರವಿಶಂಕರ್, ಭಾ.ಅ.ಸೇ., ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ ಆದ ನಾನು, ಅರಣ್ಯ ಮೊಕದ್ದಮೆಯಲ್ಲಿ ಜಪ್ತು ಮಾಡಿದ ವಾಹನ ಮಾರುತಿ ವ್ಯಾನ್ ಕೆಎ–15–M–575 (ಛಾಸ್ಸಿಸ್ ನಂ ST91Nl71627 &, ಇಂಜಿನ್ ನಂ: 1383423)ನ್ನು ಮತ್ತು ಈ ವಾಹನದಲ್ಲಿದ್ದ, ಬೀಟೆ ನಾಟಾ 56=0.147ಎಂ3ನ್ನು ಅಂತಿಮವಾಗಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡಿರುತ್ತೇನೆ. ಮುಟ್ಟುಗೋಲು ಹಾಕಿಕೊಂಡ ವಾಹನ ಮತ್ತು ಅರಣ್ಯ ಉತ್ಪನ್ನವನ್ನು ಸರ್ಕಾರಕ್ಕೆ ಅನುಕೂಲಕರವಾಗಿ ವಿಲೇ ಮಾಡಲು ಆದೇಶಿಸಿದ್ದೇನೆ. ಈ ಆದೇಶವನ್ನು ಹೇಳಿ ಬರೆಯಿಸಿ, ಗಣಕಯಂತ್ರದಲ್ಲಿ ಮುದ್ರಿಸಿ, ನಂತರ ಸರಿಪಡಿಸಿ **ದಿ:06–10–2012** ರಂದು ನನ್ನ ಸಹಿ ಹಾಗೂ ಮೊಹರಿನೊಂದಿಗೆ ತೆರೆದ ನ್ಯಾಯಾಲಯದಲ್ಲಿ ಆದೇಶಿಸಿದ್ದೇನೆ. ಈ ಆದೇಶ ಹೊರಡಿಸಿದ 30 (ಮೂವತ್ತು) ದಿನಗಳ ಒಳಗಾಗಿ ಯಾರು ಮೇಲ್ಮನವಿ ಸಲ್ಲಿಸದೇ ಹೋದಲ್ಲಿ ಇದೇ ಅಂತಿಮ ಆದೇಶವಾಗಿರುತ್ತದೆ.

ಆರ್.ರವಿಶಂಕರ್
ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ,
ಸಾಗರ ವಿಭಾಗ, ಸಾಗರ

PR.21

ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ ಇವರ ನ್ಯಾಯಾಲಯದಲ್ಲಿ

ಬಿ3:ಅಮೊ:ವಾಹನ:ವಿವ:42/11–12, ದಿನಾಂಕ:06–10–2012

ಉಪಸ್ಥಿತರು : ಆರ್.ರವಿಶಂಕರ್, ಭಾ.ಅ.ಸೇ., ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ.

ಪಿರ್ಯಾಧಿದಾರರು : ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಸಂಚಾರಿದಳ, ಶಿಕಾರಿಪುರ (ಸಹಾಯಕ ಸರ್ಕಾರಿ ಅಭಿಯೋಜಕರು)

ಬಾಧ್ಯತೆದಾರರು : ಯಾರು ಕ್ಲೇಮು ಅರ್ಜಿ ಸಲ್ಲಿಸಿರುವುದಿಲ್ಲ.

ಪ್ರಸ್ತಾವನೆ:–

ದಿ:22–01–2012ರಂದು ಮಾರುತಿ ವ್ಯಾನ್ ಕೆಎ–03–C–1535ರಲ್ಲಿ ಬೀಟೆ ನಾಟಾ ಅಕ್ರಮವಾಗಿ ಸಾಗಿಸುತ್ತಿರುವಾಗ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಸಂಚಾರಿದಳ, ಶಿಕಾರಿಪುರ ಇವರು ಪತ್ತೆಹಚ್ಚಿ ಬರೆದ ಮಹಜರ್ ಈ ಕೆಳಗಿನಂತಿದೆ.

ದಿ:22–01–2012ರಂದು ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಸಂಚಾರಿದಳ, ಶಿಕಾರಿಪುರ ಮತ್ತು ಸಿಬ್ಬಂದಿಯವರಿಗೆ ಬಂದ ಖಚಿತ ವರ್ತಮಾನದ ಮೇರೆಗೆ ಶಿಕಾರಿಪುರದಿಂದ ಆನಂದಪುರಂಕ್ಕೆ ಹೋಗುವ ಥಾರ್ ರಸ್ತೆಯಲ್ಲಿ ಗಸ್ತು ತಿರುಗುತ್ತಿರುವಾಗ ಕುಮದ್ವತಿ ಹೊಳೆಯ ತಿರುವಿನಲ್ಲಿ ಒಂದು ಬಿಳಿ ಬಣ್ಣದ ಮಾರುತಿ ವ್ಯಾನ್ ಬರುತ್ತಿರುವುದನ್ನು ಕೈ ಸನ್ನೆಯಿಂದ ನಿಲ್ಲಿಸಲು ಸೂಚಿಸಿದರೂ, ನಿಲ್ಲಿಸದೇ ವೇಗವಾಗಿ ಶಿಕಾರಿಪುರ ಕಡೆ ಹೋದಾಗ ಇಲಾಖೆಯವರು ಇಲಾಖಾ ವಾಹನದಲ್ಲಿ ಆ ವಾಹನವನ್ನು ಬೆನ್ನಟ್ಟಿದಾಗ ಶಿಕಾರಿಪುರ ತಾಲ್ಲೂಕು ಅಂಜನಾಪುರ ಹೋಬಳಿ ಈಸೂರು ಗ್ರಾಮದ ಈರಣ್ಣನ ದೇವಸ್ಥಾನದ ಮುಂದೆ ನಿಲ್ಲಿಸಿ ಆಸಾಮಿಗಳು ವಾಹನದಿಂದಿಳಿದು ಓಡಲು ಪ್ರಾರಂಭಿಸಿದರು. ಇಲಾಖೆಯವರು ಆಸಾಮಿಗಳನ್ನು ಬೆನ್ನಟ್ಟಿದರೂ ಕೈಗೆ ಸಿಗದೆ ಕಾಡಿನೊಳಗೆ ಪರಾರಿಯಾದರು. ಓಡಿ ಹೋದವರಲ್ಲಿ ಒಬ್ಬನ ಹೆಸರು ಲೋಹಿತ್ ಕುಮಾರ್ ಬಿನ್ ಧರ್ಮಪ್ಪ, ಕಣ್ಣೂರು ಗ್ರಾಮ ವಾಸಿ, ಸಾಗರ ತಾಲ್ಲೂಕು ಎಂದು ವನಪಾಲಕ ಗುರುತಿಸಿರುತ್ತಾರೆ. ನಂತರ ವಾಹನ ಪರಿಶೀಲಿಸಲಾಗಿ ಅದು ಮಾರುತಿ ವ್ಯಾನ್ ಕೆಎ–03–C–1535ಆಗಿದ್ದು, ಈ ವಾಹನದಲ್ಲಿದ್ದ 04 ಬೀಟೆ ನಾಟಾ ಅಳತೆ ಮಾಡಲಾಗಿ 0.181ಎಂ3 ಪ್ರಮಾಣವಿರುತ್ತದೆ. ಈ ತುಂಡುಗಳ ಮೇಲೆ ಇಲಾಖಾ ಛಾಪಾದ ಗುರುತಿರಲಿಲ್ಲ ಹಾಗೂ ಸಾಗಿಸಲು ರಹದಾರಿ ಇರಲಿಲ್ಲವಾದ್ದರಿಂದ ಇದು ಅಕ್ರಮ ಸಾಗಾಣಿಕೆ ಎಂದು ಪರಿಗಣಿಸಿ ವಾಹನ ಮತ್ತು ಅರಣ್ಯ ಉತ್ಪನ್ನವನ್ನು ಪ್ರಥಮ ವರ್ತಮಾನ ವರದಿ, ಮಹಜರ್ ವರದಿ, ಜಪ್ತು ವರದಿಯೊಂದಿಗೆ ಇಲಾಖಾ ಪರ ವಶಪಡಿಸಿಕೊಂಡು ಕರ್ನಾಟಕ ಅರಣ್ಯ ಕಾಯಿದೆ 1963 ಸೆಕ್ಷನ್ 50, 68, 80, 71(ಎ)ರಿಂದ(ಜಿ), 104(ಎ) ಮತ್ತು ಕರ್ನಾಟಕ ಅರಣ್ಯ ಕಾನೂನು 1969 ಉಪನಿಯಮ 144, 165ರ ಪ್ರಕಾರ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಸಂಚಾರಿದಳ, ಶಿಕಾರಿಪುರ ಇವರು ಅರಣ್ಯ ಮೊಕದ್ದಮೆ ಸಂಖ್ಯೆ:46/11–12ನ್ನು ದಾಖಲಿಸಿರುತ್ತಾರೆ. ನಂತರ ಈ ವಾಹನ ಮತ್ತು ಎಲ್ಲಾ ದಾಖಲೆಗಳನ್ನು ಈ ನ್ಯಾಯಾಲಯಕ್ಕೆ ಹಾಜರ್ಪಡಿಸಿರುತ್ತಾರೆ. ಈ ವಾಹನವನ್ನು ಸಾಗರದ ಸರ್ಕಾರಿ ನಾಟಾ ಸಂಗ್ರಹಾಲಯದಲ್ಲಿರುವ ವಾಹನ ಶೆಡ್ಡಿನಲ್ಲಿ ಸುರಕ್ಷತೆಗಾಗಿ ಇಡಲು ವಲಯ ಅರಣ್ಯಾಧಿಕಾರಿ, ಸರ್ಕಾರಿ ನಾಟಾ ಸಂಗ್ರಹಾಲಯ, ಸಾಗರ ಇವರ ಸುಪರ್ಧಿಗೆ ಕೊಡಲು ಈ ನ್ಯಾಯಾಲಯದಿಂದ ಆದೇಶವಾಗಿದೆ.

ಈ ವಾಹನದ 'ಬಿ' ಎಕ್ಸ್‌ಟ್ರ್ಯಾಕ್ಟ್‌ನ್ನು ಈ ನ್ಯಾಯಾಲಯಕ್ಕೆ ಒದಗಿಸಲು ಈ ನ್ಯಾಯಾಲಯದಿಂದ ಬಿ3–ಅಮೊ–ವಾಹನ–ವಿವ–42/11–12 ದಿ:23–01–2012ರಂದು ಸಾರಿಗೆ ಅಧಿಕಾರಿ, ಇಂದಿರಾ ನಗರ(ಪೂರ್ವ), ಬೆಂಗಳೂರು ಇವರಿಗೆ ಪತ್ರ ಬರೆದು ಕೋರಲಾಯಿತು. ಆದರೆ ಇವರಿಂದ ಯಾವುದೇ ಮಾಹಿತಿ ಲಭ್ಯವಾಗಿರುವುದಿಲ್ಲ. ಹಾಗೂ ವಾಹನದೊಳಗಡೆ ಸಿಕ್ಕ 'ಬಿ' ಎಕ್ಸ್‌ಟ್ರ್ಯಾಕ್ಟ್‌ನ ಜೆರಾಕ್ಸ್ ಪ್ರತಿಯಲ್ಲಿ ಸದರಿ ವಾಹನವು ಸಾರಿಗೆ ಅಧಿಕಾರಿ, ಸಾಗರ ಕಛೇರಿಯಲ್ಲಿ ನೋಂದಣಿಯಾಗಿರುವ ಬಗ್ಗೆ ಇರುತ್ತದೆ. ಅದರಂತೆ ಸಾರಿಗೆ ಅಧಿಕಾರಿ, ಸಾಗರ ಇವರಿಗೆ ಈ ನ್ಯಾಯಾಲಯದಿಂದ ಬಿ3–ಅಮೊ–ವಾಹನ–ವಿವ–42/11–12 ದಿ:11–09–2012ರಂದು ಪತ್ರ ಬರೆದು ಕೋರಲಾಯಿತು. ಆದರೆ ಅವರಿಂದ ಯಾವುದೇ ಮಾಹಿತಿ ಲಭ್ಯವಿರುವುದಿಲ್ಲ. ಆದ್ದರಿಂದ ಈ ವಾಹನದ ಆರ್.ಸಿ.ಮಾಲೀಕರಿಗೆ ಕರ್ನಾಟಕ ಅರಣ್ಯ ಕಾಯಿದೆ 1963 ಸೆಕ್ಷನ್ 71(ಬಿ)(l)ರ ಪ್ರಕಾರ ನೋಟೀಸ್ ಜಾರಿ ಮಾಡಲು ಸಾಧ್ಯವಾಗಿರುವುದಿಲ್ಲ.

ಈ ನಡುವೆ ಈ ವಾಹನದ ಪ್ರಚಾರಕ್ಕಾಗಿ ಈ ನ್ಯಾಯಾಲಯದಿಂದ ಬಿ3–ಅಮೊ–ವಾಹನ–ಪ್ರಕಟಣೆ–ಸಿಆರ್–35/11–12 ದಿ:12–03–2012ರಂದು ಪ್ರಕಟಣೆ ಹೊರಡಿಸಿರುತ್ತದೆ. ಈ ಪ್ರಕಟಣೆಯ ಪ್ರತಿಯನ್ನು ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯ ಪತ್ರ ವಿಭಾಗ, ಬೆಂಗಳೂರು ಮತ್ತು ವಾರ್ತಾ ಮತ್ತು ಪ್ರಚಾರ ಇಲಾಖೆ, ಬೆಂಗಳೂರು ಇವರಿಗೆ ಕಳುಹಿಸಿ ಗೆಜೆಟ್ ಮತ್ತು ದಿನಪತ್ರಿಕೆಯಲ್ಲಿ ಪ್ರಕಟಿಸಲು ಕೋರಲಾಯಿತು. ಅದರಂತೆ, ದಿ:22–03–2012ರಂದು

ವಿಜಯ ಕರ್ನಾಟಕ ದಿನಪತ್ರಿಕೆಯಲ್ಲಿ ಹಾಗೂ ದಿ:12–04–2012 ರಂದು ರಾಜ್ಯ ಗೆಜೆಟ್ ಪತ್ರಿಕೆಯಲ್ಲಿ ಈ ಪ್ರಕಟಣೆಯು ಪ್ರಕಟಗೊಂಡಿರುತ್ತದೆ. ಪತ್ರಿಕೆಯಲ್ಲಿ ಪ್ರಕಟಗೊಂಡು 30 ದಿನಗಳಾದರೂ ವಾಹನ ಮಾಲೀಕರಾಗಲೀ ಅವರ ಪರ ವಕೀಲರಾಗಲೀ ಈ ನ್ಯಾಯಾಲಯಕ್ಕೆ ಕ್ಲೇಮು ಅರ್ಜಿಯನ್ನು ಸಲ್ಲಿಸಿರುವುದಿಲ್ಲ.

ಸಹಾಯಕ ಸರ್ಕಾರಿ ಅಭಿಯೋಜಕರು ದಿ:01–09–2012ರಂದು ವಾದ ಮಂಡಿಸಿ, ಸದರಿ ವಾಹನದಲ್ಲಿ ಅರಣ್ಯ ಉತ್ಪನ್ನವನ್ನು ಸಾಗಿಸುತ್ತಿರುವಾಗ ಮಾಲು ಸಹಿತ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಸಂಚಾರಿದಳ, ಶಿಕಾರಿಪುರ ಮತ್ತು ಇವರ ಸಿಬ್ಬಂದಿಯವರು ಪತ್ತೆಹಚ್ಚಿ ಕ್ರಿಮಿನಲ್ ಕೇಸ್ ದಾಖಲಿಸಿ. ಪ್ರಥಮ ವರ್ತಮಾನ ವರದಿ, ಜಫ್ತು ವರದಿಯನ್ನು ಈ ನ್ಯಾಯಾಲಯಕ್ಕೆ ಸಲ್ಲಿಸಿರುತ್ತಾರೆ. ಇದರಿಂದ ಈ ವಾಹನದಲ್ಲಿ ಬೀಟೆ ನಾಟಾಗಳನ್ನು ಅಕ್ರಮವಾಗಿ ಸಾಗಿಸಲು ಉಪಯೋಗಿಸಿರುವುದು ಸಾಬೀತಾಗಿರುತ್ತದೆ. ಆದ್ದರಿಂದ ವಾಹನ ಮತ್ತು ಅರಣ್ಯ ಉತ್ಪನ್ನವನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಕೋರಿರುತ್ತಾರೆ.

ಈ ಪ್ರಕರಣದ ಎಲ್ಲಾ ದಾಖಲೆಗಳನ್ನು ಪರಿಶೀಲಿಸಿ, ಅಭಿಯೋಜಕರ ವಾದವನ್ನು ಕೇಳಿದೆ. ಹಾಗೂ ಈ ವಾಹನದ ಬಗ್ಗೆ ಪತ್ರಿಕಾ ಪ್ರಕಟಣೆ ಹೊರಡಿಸಿರುತ್ತದೆ. ಈ ಪ್ರಕಟಣೆಯು ರಾಜ್ಯ ಗೆಜೆಟ್‌ನಲ್ಲಿ ಮತ್ತು ದಿನಪತ್ರಿಕೆಯಲ್ಲಿ ಪ್ರಕಟಗೊಂಡು ಮತ್ತು ಆರ್.ಸಿ.ಮಾಲೀಕರಿಗೆ ಕಾನೂನು ರೀತಿ ನೋಟೀಸ್ ಜಾರಿ ಮಾಡಿ 30 ದಿನಗಳಾದರೂ ಯಾರೂ ಹಕ್ಕು ಬಾಧ್ಯತೆಯ ಅರ್ಜಿಯನ್ನು ಈ ನ್ಯಾಯಾಲಯಕ್ಕೆ ಸಲ್ಲಿಸದೇ ಇದ್ದುದ್ದರಿಂದ ಈ ಪ್ರಕರಣದ ವಿದ್ಯಾಮಾನಗಳನ್ನು ಅರಿತು ಈ ಕೆಳಗಿನಂತೆ ಆದೇಶ ಹೊರಡಿಸಿದೆ.

ಆದೇಶ

ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳನ್ನು ಗಣನೆಗೆ ತೆಗೆದುಕೊಂಡು ಆರ್.ರವಿಶಂಕರ್, ಭಾ.ಅ.ಸೇ., ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ ಆದ ನಾನು, ಅರಣ್ಯ ಮೊಕದ್ದಮೆಯಲ್ಲಿ ಜಪ್ತು ಮಾಡಿದ ವಾಹನ ಮಾರುತಿ ವ್ಯಾನ್ ಕೆಎ–03–C–1535 (ಛಾಸ್ಸಿಸ್ ನಂ ST91N53506 &, ಇಂಜಿನ್ ನಂ: F8BIN2225053)ನ್ನು ಮತ್ತು ಈ ವಾಹನದಲ್ಲಿದ್ದ, ಬೀಟೆ ನಾಟಾ 04=0.181ಎಂ3ನ್ನು ಅಂತಿಮವಾಗಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡಿರುತ್ತೇನೆ. ಮುಟ್ಟುಗೋಲು ಹಾಕಿಕೊಂಡ ವಾಹನ ಮತ್ತು ಅರಣ್ಯ ಉತ್ಪನ್ನವನ್ನು ಸರ್ಕಾರಕ್ಕೆ ಅನುಕೂಲಕರವಾಗಿ ವಿಲೇ ಮಾಡಲು ಆದೇಶಿಸಿದ್ದೇನೆ. ಈ ಆದೇಶವನ್ನು ಹೇಳಿ ಬರೆಯಿಸಿ, ಗಣಕಯಂತ್ರದಲ್ಲಿ ಮುದ್ರಿಸಿ, ನಂತರ ಸರಿಪಡಿಸಿ **ದಿ:06–10–2012** ರಂದು ನನ್ನ ಸಹಿ ಹಾಗೂ ಮೊಹರಿನೊಂದಿಗೆ ತೆರೆದ ನ್ಯಾಯಾಲಯದಲ್ಲಿ ಆದೇಶಿಸಿದ್ದೇನೆ. ಈ ಆದೇಶ ಹೊರಡಿಸಿದ 30 (ಮೂವತ್ತು) ದಿನಗಳ ಒಳಗಾಗಿ ಯಾರು ಮೇಲ್ಮನವಿ ಸಲ್ಲಿಸದೇ ಹೋದಲ್ಲಿ ಇದೇ ಅಂತಿಮ ಆದೇಶವಾಗಿರುತ್ತದೆ

ಆರ್.ರವಿಶಂಕರ್
ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ,
ಸಾಗರ ವಿಭಾಗ, ಸಾಗರ

PR.20

ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ ಇವರ ನ್ಯಾಯಾಲಯದಲ್ಲಿ

ಬಿ3:ಅಮೊ:ವಾಹನ:ವಿವ:43/11–12, ದಿನಾಂಕ:06–10–2012

ಉಪಸ್ಥಿತರು : ಆರ್.ರವಿಶಂಕರ್, ಭಾ.ಅ.ಸೇ., ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ.

ಫಿರ್ಯಾಧಿದಾರರು : ವಲಯ ಅರಣ್ಯಾಧಿಕಾರಿ, ಸಾಗರ ವಲಯ, ಸಾಗರ (ಸಹಾಯಕ ಸರ್ಕಾರಿ ಅಭಿಯೋಜಕರು)

ಬಾಧ್ಯತೆದಾರರು : ಯಾರು ಕ್ಲೇಮು ಅರ್ಜಿ ಸಲ್ಲಿಸಿರುವುದಿಲ್ಲ.

ಪ್ರಸ್ತಾವನೆ:–

ದಿ:09–02–2012ರಂದು ಮಾರುತಿ ವ್ಯಾನ್ ಜಿಎ–02–ಎ–6563ರಲ್ಲಿ ಮತ್ತು ಟಿ.ವಿ.ಎಸ್.ಸ್ಟಾರ್ ಸಿಟಿ ಬೈಕ್‌ನಲ್ಲಿ ಬೀಟೆ ನಾಟಾ ಅಕ್ರಮವಾಗಿ ಸಾಗಿಸುತ್ತಿರುವಾಗ ತ್ಯಾಗರ್ತಿ ಶಾಖೆ ವನಪಾಲಕ ಪತ್ತೆಹಚ್ಚಿ ಬರೆದ ಮಹಜರ್ ಈ ಕೆಳಗಿನಂತಿದೆ.

ದಿ:08–02–2012ರಂದು ಸಾಗರ ವಲಯದ ತ್ಯಾಗರ್ತಿ ಶಾಖೆಯ ವನಪಾಲಕ ಮತ್ತು ಸಿಬ್ಬಂದಿಯವರು ಸಾಗರ ತಾಲ್ಲೂಕು, ಕಸಬಾ ಹೋಬಳಿ ಇಂಡುವಳ್ಳಿಯಿಂದ ತ್ಯಾಗರ್ತಿಗೆ ಹೋಗುವ ರಸ್ತೆಯ ಮುಳ್ಳುಕೆರೆ ಬಸ್ ನಿಲ್ದಾಣದ ಹತ್ತಿರ ರಾತ್ರಿ ಗಸ್ತು ಕಾಯುತ್ತಿರುವಾಗ ದಿ:09–02–2012ರ ಬೆಳಗಿನ ಜಾವ 3.30ರ ಸಮಯದಲ್ಲಿ ಒಂದು ಮಾರುತಿ ವ್ಯಾನ್ ಮತ್ತು ಒಂದು ದ್ವಿ ಚಕ್ರ ವಾಹನ ಒಟ್ಟಿಗೆ ಬರುತ್ತಿರುವುದನ್ನು ಬ್ಯಾಟರಿ ಬೆಳಕಿನ ಸಹಾಯದಿಂದ ನಿಲ್ಲಿಸಲು ಸೂಚಿಸಿದಾಗ ವಾಹನಗಳನ್ನು ಸ್ವಲ್ಪ ದೂರದಲ್ಲಿ ನಿಲ್ಲಿಸಿ ವಾಹನದಲ್ಲಿದ್ದ ಆಸಾಮಿಗಳು ವಾಹನದಿಂದ ಇಳಿದು ಓಡಲು ಪ್ರಾರಂಭಿಸಿದರು. ಅವರನ್ನು ಇಲಾಖೆಯವರು ಬೆನ್ನಟ್ಟಿದರೂ ಕೈಗೆ ಸಿಗದೇ ಪರಾರಿಯಾದರು. ನಂತರ ವಾಹನ ಪರಿಶೀಲಿಸಲಾಗಿ ಅದು ನೀಲಿ ಬಣ್ಣದ ಮಾರುತಿ ವ್ಯಾನ್ ಜಿಎ–02–ಎ–6563 ಆಗಿದ್ದು, ಈ ವಾಹನದೊಳಗಡೆ ಹಸಿಯಾದ 7 ಬೀಟೆ ನಾಟಾಗಳಿದ್ದು ಅವುಗಳನ್ನು ಗರಗಸದಿಂದ ಕೊಯ್ತ ಮಾಡಿರುತ್ತಾರೆ ಹಾಗೂ ಅವುಗಳನ್ನು ಅಳತೆ ಮಾಡಲಾಗಿ 0.467ಎಂ3 ಪ್ರಮಾಣವಿರುತ್ತದೆ. ಈ ತುಂಡುಗಳ ಮೇಲೆ ಇಲಾಖಾ ಛಾಪಾದ ಗುರುತಿರಲಿಲ್ಲ ಹಾಗೂ ಸಾಗಿಸಲು ರಹದಾರಿ ಇರಲಿಲ್ಲವಾದ್ದರಿಂದ ಇದು ಅಕ್ರಮ ಸಾಗಾಣಿಕೆ ಎಂದು ಪರಿಗಣಿಸಿ ಮಾರುತಿ ವ್ಯಾನ್ ಮತ್ತು 07 ಬೀಟೆ ನಾಟಾ & ಹಿಂಬಾಲಿಸುತ್ತಿದ್ದ ದ್ವಿಚಕ್ರ ವಾಹನ ಟಿ.ವಿ.ಎಸ್.ಸ್ಟಾರ್ ಸಿಟಿ ಬೈಕ್ (ನಂಬರ್ ಇರುವುದಿಲ್ಲ)ನ್ನು ಪ್ರಥಮ ವರ್ತಮಾನ ವರದಿ, ಮಹಜರ್ ವರದಿ, ಜಪ್ತು ವರದಿಯೊಂದಿಗೆ ಇಲಾಖಾ ಪರ ವಶಪಡಿಸಿಕೊಂಡು ಕರ್ನಾಟಕ ಅರಣ್ಯ ಕಾಯಿದೆ 1963 ಸೆಕ್ಷನ್ 24, 62, 71(ಎ), 104(ಎ) ಮತ್ತು ಕರ್ನಾಟಕ ಅರಣ್ಯ ಕಾನೂನು 1969 ಉಪನಿಯಮ 144, 165ರ ಪ್ರಕಾರ ತ್ಯಾಗರ್ತಿ ಶಾಖೆ ವನಪಾಲಕರು ಅರಣ್ಯ ಮೊಕದ್ದಮೆ ಸಂಖ್ಯೆ:88/11–12ನ್ನು ದಾಖಲಿಸಿರುತ್ತಾರೆ. ನಂತರ ವಾಹನ ಮತ್ತು ಅರಣ್ಯ ಉತ್ಪನ್ನವನ್ನು ವಲಯ ಅರಣ್ಯಾಧಿಕಾರಿ, ಸಾಗರ ವಲಯ ಇವರ ಸಮಕ್ಷಮ ಹಾಜರ್ಪಡಿಸಿರುತ್ತಾರೆ.

ವಲಯ ಅರಣ್ಯಾಧಿಕಾರಿ, ಸಾಗರ ವಲಯ ಇವರು ಈ ವಾಹನ ಮತ್ತು ಎಲ್ಲಾ ದಾಖಲೆಗಳನ್ನು ಈ ನ್ಯಾಯಾಲಯಕ್ಕೆ ಹಾಜರ್ಪಡಿಸಿರುತ್ತಾರೆ. ಈ ವಾಹನವನ್ನು ಸಾಗರದ ಸರ್ಕಾರಿ ನಾಟಾ ಸಂಗ್ರಹಾಲಯದಲ್ಲಿರುವ ವಾಹನ ಶೆಡ್ಡಿನಲ್ಲಿ ಸುರಕ್ಷತೆಗಾಗಿ ಇಡಲು ವಲಯ ಅರಣ್ಯಾಧಿಕಾರಿ, ಸರ್ಕಾರಿ ನಾಟಾ ಸಂಗ್ರಹಾಲಯ, ಸಾಗರ ಇವರ ಸುಪರ್ಧಿಗೆ ಕೊಡಲು ಈ ನ್ಯಾಯಾಲಯದಿಂದ ಆದೇಶವಾಗಿದೆ.

ಜಫ್ತಾದ ಈ ಎರಡು ವಾಹನಗಳಲ್ಲಿ ಮಾರುತಿ ವ್ಯಾನ್ ಜಿಎ–02–ಎ–6563ರ ವಾಹನದ 'ಬಿ' ಎಕ್ಸ್‌ಟ್ರ್ಯಾಕ್ಟ್‌ನ್ನು ಈ ನ್ಯಾಯಾಲಯಕ್ಕೆ ಒದಗಿಸಲು ಈ ನ್ಯಾಯಾಲಯದಿಂದ ಬಿ3–ಅಮೊ–ವಾಹನ–ವಿವ–43/11–12 ದಿ:09–02–2012ರಂದು "The Director of Transport Commissioner", Panaji, Goa ಇವರಿಗೆ & ಸ್ಟಾರ್ ಸಿಟಿ ಬೈಕ್‌ನ 'ಬಿ' ಎಕ್ಸ್‌ಟ್ರ್ಯಾಕ್ಟ್‌ನ್ನು ಈ ನ್ಯಾಯಾಲಯಕ್ಕೆ ಒದಗಿಸಲು ಈ ನ್ಯಾಯಾಲಯದಿಂದ ಬಿ3–ಅಮೊ–ವಾಹನ–ವಿವ–43/11–12 ದಿ:09–02–2012ರಂದು ಸಾರಿಗೆ ಅಧಿಕಾರಿ, ಸಾಗರ ಇವರಿಗೆ ಪತ್ರ ಬರೆದು ಕೋರಲಾಯಿತು. ಆದರೆ ಈ ಎರಡು ವಾಹನಗಳ 'ಬಿ' ಎಕ್ಸ್‌ಟ್ರ್ಯಾಕ್ಟ್‌ನ್ನು ಸಾರಿಗೆ ಅಧಿಕಾರಿಗಳು ಇಲ್ಲಿಯವರೆಗೆ ಒದಗಿಸಿರುವುದಿಲ್ಲ. ಆದ್ದರಿಂದ ಈ ವಾಹನದ ಆರ್.ಸಿ.ಮಾಲೀಕರಿಗೆ ಕರ್ನಾಟಕ ಅರಣ್ಯ ಕಾಯಿದೆ 1963 ಸೆಕ್ಷನ್ 71(ಬಿ)(i)ರ ಪ್ರಕಾರ ನೋಟೀಸ್ ಜಾರಿ ಮಾಡಲು ಸಾಧ್ಯವಾಗಿರುವುದಿಲ್ಲ.

ಈ ನಡುವೆ ಈ ವಾಹನದ ಪ್ರಚಾರಕ್ಕಾಗಿ ಈ ನ್ಯಾಯಾಲಯದಿಂದ ಬಿ3–ಅಮೊ–ವಾಹನ–ಪ್ರಕಟಣೆ–ಸಿಆರ್–35/11–12 ದಿ:12–03–2012ರಂದು ಪ್ರಕಟಣೆ ಹೊರಡಿಸಿರುತ್ತದೆ. ಈ ಪ್ರಕಟಣೆಯ ಪ್ರತಿಯನ್ನು ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯ ಪತ್ರ ವಿಭಾಗ, ಬೆಂಗಳೂರು ಮತ್ತು ವಾರ್ತಾ ಮತ್ತು ಪ್ರಚಾರ ಇಲಾಖೆ, ಬೆಂಗಳೂರು ಇವರಿಗೆ ಕಳುಹಿಸಿ ಗೆಜೆಟ್ ಮತ್ತು ದಿನಪ್ರತಿಕೆಯಲ್ಲಿ ಪ್ರಕಟಿಸಲು ಕೋರಲಾಯಿತು. ಅದರಂತೆ, ದಿ:22–03–2012ರಂದು ವಿಜಯ ಕರ್ನಾಟಕ ದಿನಪತ್ರಿಕೆಯಲ್ಲಿ ಮತ್ತು ದಿ:12–04–2012 ರಂದು ರಾಜ್ಯ ಗೆಜೆಟ್ ಪತ್ರಿಕೆಯಲ್ಲಿ ಈ ಪ್ರಕಟಣೆಯು ಪ್ರಕಟಗೊಂಡಿರುತ್ತದೆ. ಪತ್ರಿಕೆಯಲ್ಲಿ ಪ್ರಕಟಗೊಂಡು 30 ದಿನಗಳಾದರೂ ವಾಹನ ಮಾಲೀಕರಾಗಲೀ ಅವರ ಪರ ವಕೀಲರಾಗಲೀ ಈ ನ್ಯಾಯಾಲಯಕ್ಕೆ ಕ್ಲೇಮು ಅರ್ಜಿಯನ್ನು ಸಲ್ಲಿಸಿರುವುದಿಲ್ಲ.

ಸಹಾಯಕ ಸರ್ಕಾರಿ ಅಭಿಯೋಜಕರು ದಿ:01–09–2012ರಂದು ವಾದ ಮಂಡಿಸಿ, ಸದರಿ ವಾಹನದಲ್ಲಿ ಅರಣ್ಯ ಉತ್ಪನ್ನವನ್ನು ಸಾಗಿಸುತ್ತಿರುವಾಗ ಮಾಲು ಸಹಿತ ಸಾಗರ ವಲಯದ ತ್ಯಾಗರ್ತಿ ಶಾಖಾ ವನಪಾಲಕರು ಮತ್ತು ಸಿಬ್ಬಂದಿಯವರು ಪತ್ತೆಹಚ್ಚಿ ಕ್ರಿಮಿನಲ್ ಕೇಸ್ ದಾಖಲಿಸಿರುತ್ತಾರೆ. ಕೇಸ್ ದಾಖಲಿಸಿದ ಬಗ್ಗೆ ಪ್ರಥಮ ವರ್ತಮಾನ ವರದಿ, ಜಫ್ತು ವರದಿಯನ್ನು ವಲಯ ಅರಣ್ಯಾಧಿಕಾರಿ, ಸಾಗರ ವಲಯ ಇವರು ಈ ನ್ಯಾಯಾಲಯಕ್ಕೆ ಸಲ್ಲಿಸಿರುತ್ತಾರೆ. ಇದರಿಂದ ಈ ವಾಹನದಲ್ಲಿ ಬೀಟೆ ನಾಟಾಗಳನ್ನು ಅಕ್ರಮವಾಗಿ ಸಾಗಿಸಲು ಉಪಯೋಗಿಸಿರುವುದು ಸಾಬೀತಾಗಿರುತ್ತದೆ. ಆದ್ದರಿಂದ ವಾಹನ ಮತ್ತು ಅರಣ್ಯ ಉತ್ಪನ್ನವನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಕೋರಿರುತ್ತಾರೆ.

ಈ ಪ್ರಕರಣದ ಎಲ್ಲಾ ದಾಖಲೆಗಳನ್ನು ಪರಿಶೀಲಿಸಿ, ಅಭಿಯೋಜಕರ ವಾದವನ್ನು ಕೇಳಿದೆ. ಹಾಗೂ ಈ ವಾಹನದ ಬಗ್ಗೆ ಪತ್ರಿಕಾ ಪ್ರಕಟಣೆ ಹೊರಡಿಸಿರುತ್ತದೆ. ಈ ಪ್ರಕಟಣೆಯು ರಾಜ್ಯ ಗೆಜೆಟ್‌ನಲ್ಲಿ ಮತ್ತು ದಿನಪತ್ರಿಕೆಯಲ್ಲಿ ಪ್ರಕಟಗೊಂಡು 30 ದಿನಗಳಾದರೂ ಯಾರೂ ಹಕ್ಕು ಬಾಧ್ಯತೆಯ ಅರ್ಜಿಯನ್ನು ಈ ನ್ಯಾಯಾಲಯಕ್ಕೆ ಸಲ್ಲಿಸದೇ ಇದ್ದುದ್ದರಿಂದ ಈ ಪ್ರಕರಣದ ವಿದ್ಯಾಮಾನಗಳನ್ನು ಅರಿತು ಈ ಕೆಳಗಿನಂತೆ ಆದೇಶ ಹೊರಡಿಸಿದೆ.

ಆದೇಶ

ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳನ್ನು ಗಣನೆಗೆ ತೆಗೆದುಕೊಂಡು ಆರ್.ರವಿಶಂಕರ್, ಭಾ.ಅ.ಸೇ., ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ ಆದ ನಾನು, ಅರಣ್ಯ ಮೊಕದ್ದಮೆಯಲ್ಲಿ ಜಪ್ತು ಮಾಡಿದ ವಾಹನ ಮಾರುತಿ ವ್ಯಾನ್ ಜಿಎ–02–ಎ–6563 (ಛಾಸ್ಸಿಸ್ ನಂ: & ಇಂಜಿನ್ ನಂ: Not visible) & ಟಿವಿಎಸ್ ಸ್ಟಾರ್ ಸಿಟಿ ನಂಬರ್ ಇಲ್ಲ (ಛಾಸ್ಸಿಸ್ ನಂ: MD625NF1161A10277, ಇಂಜಿನ್ ನಂ: AFIAC1519665) ವನ್ನು ಮತ್ತು ಈ ವಾಹನದಲ್ಲಿದ್ದ, ಬೀಟೆ ನಾಟಾ 7=0.465ಎಂ3ನ್ನು ಅಂತಿಮವಾಗಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡಿರುತ್ತೇನೆ. ಮುಟ್ಟುಗೋಲು ಹಾಕಿಕೊಂಡ ವಾಹನ ಮತ್ತು ಅರಣ್ಯ ಉತ್ಪನ್ನವನ್ನು ಸರ್ಕಾರಕ್ಕೆ ಅನುಕೂಲಕರವಾಗಿ ವಿಲೇ ಮಾಡಲು ಆದೇಶಿಸಿದ್ದೇನೆ. ಈ ಆದೇಶವನ್ನು ಹೇಳಿ ಬರೆಯಿಸಿ, ಗಣಕಯಂತ್ರದಲ್ಲಿ ಮುದ್ರಿಸಿ, ನಂತರ ಸರಿಪಡಿಸಿ **ದಿ:06–10–2012** ರಂದು ನನ್ನ ಸಹಿ ಹಾಗೂ ಮೊಹರಿನೊಂದಿಗೆ ತೆರೆದ ನ್ಯಾಯಾಲಯದಲ್ಲಿ ಆದೇಶಿಸಿದ್ದೇನೆ. ಈ ಆದೇಶ ಹೊರಡಿಸಿದ 30 (ಮೂವತ್ತು) ದಿನಗಳ ಒಳಗಾಗಿ ಯಾರು ಮೇಲ್ಮನವಿ ಸಲ್ಲಿಸದೇ ಹೋದಲ್ಲಿ ಇದೇ ಅಂತಿಮ ಆದೇಶವಾಗಿರುತ್ತದೆ

ಆರ್.ರವಿಶಂಕರ್
ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ,
ಸಾಗರ ವಿಭಾಗ, ಸಾಗರ

PR.22

COMMERCIAL TAXES DEPARTMENT

PROCEEDINGS OF THE COMMISSIONER OF COMMERCIAL TAXES, (KARNATAKA), BANGALORE-CLARIFICATION UNDER SECTION 59(4) OF THE KARNATAKA VALUE ADDED TAX ACT, 2003.

Sub: KVAT Act, 2003 - Clarification under Section 59(4) regarding the rate of tax applicable on 'PVCcoated Plastic Sheets' - reg.

Ref: Application dated: 05-10-2012 of M/s. Coorg CoirandRexine Depot. Madikeri, TIN 29270380152

In the application cited aboveof M/s. Coorg Coir and Rexine Depot, Coorg Cardamom Co-operative Marketing Society Ltd., building, Opp. Head Post Office, Main road, Madikeri-571201, has sought clarification regarding the rate of tax applicable on 'PVC Coated Plastic Sheets'.

2. Section 59(4) of the Karnataka Value Added Tax Act , 2003 empowers the Commissioner of Commercial Taxes to clarify the rate of tax payable under the Act, if he considers it necessary or expedient so to do, for the purpose of maintaining uniformity in the work of assessments and collection of revenue. It is examined and found that the clarification requested by the petitioner is within the scope of the aforesaid provision and it is necessary that the clarification be issued for the purpose of maintaining uniformity in the work of assessments and collection of revenue.

3. Hence the following clarification is issued.

CLARIFICATION NO.CLR.CR.139/12-13, DATED 28-12-2012

It is clarified that 'PVC Coated Plastic Sheets' falling under CET Heading 3921.90.29' are liable to tax at 14.5% from 01-08-2012 under Section 4(1)(b)(iii) of the Karnataka Value Added Tax Act,2003.

YOGENDRA TRIPATHI

Commissioner of Commercial Taxes,

PR.15 (Karnataka), Bangalore

COMMERCIAL TAXES DEPARTMENT

PROCEEDINGS OF THE COMMISSIONER OF COMMERCIAL TAXES, (KARNATAKA), BANGALORE- CLARIFICATION UNDER SECTION 59(4) OF THE KARNATAKA VALUE ADDED TAX ACT, 2003.

Sub: KVAT Act, 2003 - Clarification under Section 59(4) regarding the rate of tax applicable on 'structural steel fabricated and galvanized steel portals, and parts of structures' - reg.

Ref: Application dated: 22-11-2012 of M/s. Kavcon Engineers Pvt Ltd., Bangalore. TIN No.- 29050219835.

In the application cited aboveof M/s. Kavcon Engineers Pvt. Ltd.,20 K.M Mysore road, Kumbalgod P.O, Bangalore-560074 has sought clarification regarding the rate of tax applicable on ''structural steel fabricated and galvanized steel portals, and parts of structures'

2. Section 59(4) of the Karnataka Value Added Tax Act , 2003 empowers the Commissioner of Commercial Taxes to clarify the rate of tax payable under the Act, if he considers it necessary or expedient so to do, for the purpose of maintaining uniformity in the work of assessments and collection of revenue. It is examined and found that the clarification requested by the petitioner is within the scope of the aforesaid provision and it is necessary that the clarification be issued for the purpose of maintaining uniformity in the work of assessments and collection of revenue.

3. Hence the following clarification is issued.

CLARIFICATION NO.CLR.CR.162/12-13, DATED 28 -12-2012

It is clarified that on 'structural steel fabricated and galvanized steel portals, and parts of structures' are liable to tax at 14% from 01.04.2011 to 31.07.2012 under Section 4(1)(b) of the Karnataka Value Added Tax Act,2003.

YOGENDRA TRIPATHI

Commissioner of Commercial Taxes,

PR.16 (Karnataka), Bangalore

COMMERCIAL TAXES DEPARTMENT

PROCEEDINGS OF THE COMMISSIONER OF COMMERCIAL TAXES, (KARNATAKA), BANGALORE- CLARIFICATION UNDER SECTION 59(4) OF THE KARNATAKA VALUE ADDED TAX ACT, 2003.

Sub: KVAT Act, 2003 - Clarification under Section 59(4) regarding the rate of tax applicable on 'Disposable plastic Straw and Stirrers'-reg.

Ref: Application dated: 13-12-2012 of M/s. ZESTO strawIndustriy, Bangalore.

TIN 29560891522.

In the application cited aboveof M/s. ZESTO Straw Industries, No.9, Industrial Sub Road, Begur Main Road, Bommanahalli, Bangalore-560068 has sought clarification regarding the rate of tax applicable on 'Disposable Plastic Straw and Stirrers'.

2. Section 59(4) of the Karnataka Value Added Tax Act , 2003 empowers the Commissioner of Commercial Taxes to clarify the rate of tax payable under the Act, if he considers it necessary or expedient so to do, for the purpose of maintaining uniformity in the work of assessments and collection of revenue. It is examined and found that the clarification requested by the petitioner is within the scope of the aforesaid provision and it is necessary that the clarification be issued for the purpose of maintaining uniformity in the work of assessments and collection of revenue.

3. Hence the following clarification is issued.

CLARIFICATION NO.CLR.CR.176/12-13, DATED 02-01-2013

It is clarified that 'Disposable Plastic Straws and Stirrers' are liable to tax at 14.5% from 01-08-2012 under Section 4(1)(b)(iii) of the Karnataka Value Added Tax Act,2003

YOGENDRA TRIPATHI

Commissioner of Commercial Taxes,

PR.47 (Karnataka), Bangalore

COMMERCIAL TAXES DEPARTMENT

PROCEEDINGS OF THE COMMISSIONER OF COMMERCIAL TAXES, (KARNATAKA), BANGALORE-CLARIFICATION UNDER SECTION 59(4) OF THE KARNATAKA VALUE ADDED TAX ACT, 2003.

Sub: KVAT Act, 2003 - Clarification under Section 59(4) regarding the rate of tax applicable on 'Herbal shampoo and Herbal hair dye-reg.

Ref: Application dated: 24-10-2011 of Sri. D. Reddy Sandeep,Proprietor, M/s. S.V. Agencies, Bangalore.(TIN 29380562403)

In the application cited aboveof Sri. D. Reddy Sandeep, Proprietor, M/s. S.V. Agencies, No.473, 12th Cross, 28th Main, 1st Phase, J.P. Nagar, Bangalore-560078 has sought clarification regarding the rate of tax applicable on 'Herbal shampoo and Herbal hair dye'.

2.Section 59(4) of the Karnataka Value Added Tax Act , 2003 empowers the Commissioner of Commercial Taxes to clarify the rate of tax payable under the Act, if he considers it necessary or expedient so to do, for the purpose of maintaining uniformity in the work of assessments and collection of revenue. It is examined and found that the clarification requested by the petitioner is within the scope of the aforesaid provision and it is necessary that the clarification be issued for the purpose of maintaining uniformity in the work of assessments and collection of revenue.

3. Hence the following clarification is issued.

CLARIFICATION NO.CLR.CR.148/11-12, DATED 19-01-2013

It is clarified that 'Herbal shampoo and Herbal hair dye' are liable to tax at 14.5% from 01-08-2012 under Section 4(1)(b)(iii) of the Karnataka Value Added Tax Act,2003**.**

YOGENDRA TRIPATHI
Commissioner of Commercial Taxes,
(Karnataka), Bangalore

PR.91

COMMERCIAL TAXES DEPARTMENT

PROCEEDINGS OF THE COMMISSIONER OF COMMERCIAL TAXES,(KARNATAKA), BANGALORE – CLARIFICATION UNDER SECTION 12 (7)OF THE KARNATAKA TAX ON ENTRY OF GOODS ACT, 1979

